ವಿಜಯಪುರ | ಸಂಪುಟ 04 | ಸಂಚಿಕೆ 109 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಗುರುವಾರ, ಜೂನ್, 18, 2026

"ಡಿ ಕೆ ಶಿವಕುಮಾರ್ ನೇತೃತ್ವದ ಮೊದಲ ಹಂತದ ಸಂಪುಟ ರಚನೆಯಲ್ಲಿ ಸಚಿವ ಸ್ಥಾನದ ನಿರೀಕ್ಷೆಯಲ್ಲಿದ್ದೆ. ಸಿಗಲಿಲ್ಲ, ಎರಡನೇ ಹಂತದ ಸಂಪುಟ ರಚನೆಯಲ್ಲಿ ಕೂಡ ಸಿಗುವ ವಿಶ್ವಾಸವಿದೆ, ನೋಡೋಣ ಹೈಕಮಾಂಡ್ ಏನು ನಿರ್ಧಾರ ಮಾಡುತ್ತದೋ ಅದಕ್ಕೆ ನಾನು ಬದ್ಧ."



■ ಜಮೀರ ಅಹ್ಮದಖಾನ್
ಮಾಜಿ ಸಚಿವರು

# ದೇಶದ ಏಳ್ಗೆ ತಡೆಗೆ ವಿರೋಧಿಗಳಿಂದ ಸುಳ್ಳು ನಿರೂಪಣೆ ಸೃಷ್ಟಿ

## ಭಾರತದ ಪ್ರಗತಿಯು ಇಡೀ ಪ್ರಪಂಚದ ಕಲ್ಯಾಣಕ್ಕಾಗಿ ಅತ್ಯಗತ್ಯ। ಆರೆಸ್ಸೆಸ್ ಮುಖ್ಯಸ್ಥ ಮೋಹನ್ ಭಾಗವತ್ ಹೇಳಿಕೆ

ನವದೆಹಲಿ: ವೇಗವಾಗಿ ಬೆಳೆಯುತ್ತಿರುವ ಭಾರತದ ಶಕ್ತಿ ಮತ್ತು ಏಳಿಗೆಯನ್ನು ದುರ್ಬಲಗೊಳಿಸಲು ದೇಶದ ಒಳಗೆ ಮತ್ತು ಹೊರಗೆ ಸುಳ್ಳು ನಿರೂಪಣೆಗಳನ್ನು ಸೃಷ್ಟಿಸಲಾಗುತ್ತಿದೆ ಎಂದು ರಾಷ್ಟ್ರೀಯ ಸ್ವಯಂಸೇವಕ ಸಂಘದ (RSS) ಮುಖ್ಯಸ್ಥ ಮೋಹನ್ ಭಾಗವತ್ ಹೇಳಿದ್ದಾರೆ.

ಮಹಾರಾಣ ಪ್ರತಾಪ್ ಜಯಂತಿಯ ಸಂದರ್ಭದಲ್ಲಿ ಆಯೋಜಿಸಲಾದ ಕಾರ್ಯಕ್ರಮವೊಂದರಲ್ಲಿ ಭಾಗವತ್, ಇಂದು ಕೆಲವರು ಭಾರತ ಏಳಿಗೆ ಕಾಣದಂತೆ ನೋಡಿಕೊಳ್ಳಲು ಪ್ರಯತ್ನಿಸುತ್ತಿದ್ದಾರೆ. ಈ ಉದ್ದೇಶಕ್ಕಾಗಿ ಸುಳ್ಳು ನಿರೂಪಣೆಗಳನ್ನು ರಚಿಸಲಾಗುತ್ತಿದೆ. ಸುಳ್ಳು ಸುದ್ದಿಗಳನ್ನು ಹರಡುವ ಮೂಲಕ ಜನರನ್ನು ದಾರಿ ತಪ್ಪಿಸಲು ವಿವಿಧ ತಂತ್ರಗಳನ್ನು ಬಳಸಲಾಗುತ್ತಿದೆ ಎಂದು ಹೇಳಿದರು.

ಸುಳ್ಳು ನಿರೂಪಣೆಗಳು ಮಾಡುತ್ತಿರುವವರು ದೊಡ್ಡ ಸಂಖ್ಯೆಯಲ್ಲಿದ್ದಾರೆ. ಅವರು ಅಧಿಕಾರ, ಹಣ ಮತ್ತು ಸಂಘಟನಾ ಸಾಮರ್ಥ್ಯದಂತಹ ಗಮನಾರ್ಹ ಶಕ್ತಿಯನ್ನು ಹೊಂದಿದ್ದಾರೆ. ಇದರ ಹೊರತಾಗಿಯೂ, ಜನರು ತಮ್ಮ ಮೌಲ್ಯಗಳ ಮೇಲೆ ದೃಢವಾಗಿ ನಿಲ್ಲಬೇಕು. ಭಾರತದ ಪ್ರಗತಿಯು ತನ್ನದೇ ಆದ ಕಲ್ಯಾಣಕ್ಕಾಗಿ ಮಾತ್ರವಲ್ಲದೆ ಇಡೀ ಪ್ರಪಂಚದ ಕಲ್ಯಾಣಕ್ಕಾಗಿ ಅತ್ಯಗತ್ಯ ಎಂದು ಆರ್‌ಎಸ್‌ಎಸ್ ಮುಖ್ಯಸ್ಥರು ಒತ್ತಿ ಹೇಳಿದರು.

ಜಗತ್ತು ಬಲವಾದ ಭಾರತವನ್ನು ಹೊಂದುವುದು ಅತ್ಯಂತ ಮುಖ್ಯ ಎಂದರು.

ಹಲ್ದಿಘಾಟಿ ಮತ್ತು ಮಹಾರಾಣಾ ಪ್ರತಾಪ್ ಅವರ ಐತಿಹಾಸಿಕ ಯುದ್ಧದ ಪರಂಪರೆಯನ್ನು ನೆನಪಿಸಿಕೊಂಡ ಮೋಹನ್ ಭಾಗವತ್, ನಮ್ಮ ಇತಿಹಾಸ ಗುಲಾಮಗಿ-



ರಿಯದ್ದಲ್ಲ ಎಂದು ಹೇಳಿದರು.

ಇದು ನಮ್ಮನ್ನು ಗುಲಾಮರನ್ನಾಗಿ ಮಾಡಲು ಪ್ರಯತ್ನಿಸಿದವರ ವಿರುದ್ಧದ ಹೋರಾಟದ ಇತಿಹಾಸ. ಮಹಾರಾಣಾ ಪ್ರತಾಪ್ ಅವರ ಹೋರಾಟವು ಧರ್ಮ, ಸಂಸ್ಕೃತಿ ಮತ್ತು ಸ್ವಾಭಿಮಾನವನ್ನು ರಕ್ಷಿಸುವುದಾಗಿತ್ತು. ಮಹಾರಾಣಾ ಪ್ರತಾಪ್ ಯಾವುದೇ ವೈಯಕ್ತಿಕ ಲಾಭಕ್ಕಾಗಿ ಹೋರಾಡಲಿಲ್ಲ. ಸಮಾಜ, ಸಂಸ್ಕೃತಿ ಮತ್ತು ತನ್ನ ಮಾತೃಭೂಮಿಯ ಸ್ವಾತಂತ್ರ್ಯಕ್ಕಾಗಿ ಅವರು ದಬ್ಬಾಳಿಕೆಯ ವಿರುದ್ಧ ಹೋರಾಡಿದ್ದರು ಎಂದರು.

ಇಂದಿನ ಸವಾಲುಗಳನ್ನು ಎದುರಿಸಲು, ಪ್ರತಿ-ಕೂಲ ಸಂದರ್ಭಗಳಲ್ಲಿಯೂ ದೃಢವಾಗಿ ನಿಲ್ಲುವುದನ್ನು ಐತಿಹಾಸಿಕ ವೀರರಿಂದ ನಾವು ಕಲಿಯಬೇಕು ಎಂದು ಅವರು ಹೇಳಿದರು.

ಭಾರತದ ನಿಜವಾದ ಶಕ್ತಿ ಕೇವಲ ಸಂಖ್ಯೆಯಲ್ಲಿ ಅಥವಾ ಭೌತಿಕ ಸಂಪನ್ಮೂಲಗಳಲ್ಲಿ ಅಲ್ಲ, ಆದರೆ ಅದರ ಸಾಂಸ್ಕೃತಿಕ ಮೌಲ್ಯಗಳಲ್ಲಿದೆ ಎಂದರು.

### ಮೋಹನ್ ಭಾಗವತ್ ಇದುವರೆಗೆ ಉತ್ತರ ನೀಡಿಲ್ಲ :ಖರ್ಗೆ

ಬೆಂಗಳೂರು: ರಾಷ್ಟ್ರೀಯ ಸ್ವಯಂಸೇವಕ ಸಂಘ (RSS) ನೋಂದಣಿ ವಿಷಯಕ್ಕೆ ಸಂಬಂಧಿಸಿದಂತೆ ತಾನು ಬರೆದ ಪತ್ರಕ್ಕೆ ಸಂಘದ ಮುಖ್ಯಸ್ಥ ಮೋಹನ್ ಭಾಗವತ್ ಅವರು ಇದುವರೆಗೆ ಉತ್ತರ ನೀಡಿಲ್ಲ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ದೆಹಲಿನಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ತಾವು ರಾಜ್ಯ ಸರ್ಕಾರದ ಪ್ರತಿನಿಧಿಯಾಗಿ ಆ ಪತ್ರ ಬರೆದಿದ್ದರಿಂದ ಅದಕ್ಕೆ ಉತ್ತರ ನೀಡುವುದು ಮೋಹನ್ ಭಾಗವತ್ ಅವರ ಅಗತ್ಯ ಎಂದರು.



ನನ್ನ ಪತ್ರಕ್ಕೆ ಪ್ರತಿಕ್ರಿಯೆಯಾಗಿ ಮೋಹನ್ ಭಾಗವತ್ ಮಾತನಾಡಿದ್ದಾರೆ ಎಂದು ಸೋಷಿಯಲ್ ಮೀಡಿಯಾದಲ್ಲಿ ಮತ್ತು ಮಾಧ್ಯಮಗಳಲ್ಲಿ ಹ-ರಿದಾಡುತ್ತಿರುವ ವಿಡಿಯೋ ತಪ್ಪು. ನಾನು ನನ್ನ ಪತ್ರವನ್ನು ಜೂನ್ 15ರಂದು ಕಳುಹಿಸಿದ್ದು, ಸಾಮಾಜಿಕ ಜಾಲತಾಣದಲ್ಲೂ ಹಾಕಿದ್ದೇನೆ. ಆದರೆ ಅವರು ಮಾಡಿದ ಆ ಮಾತುಕತೆ ಜೂನ್ 13 ಅಥವಾ 14ರಂದು ನಡೆದಿದೆ ಎಂದು ಹೇಳಿದರು.

# ಸಮಾಜದಲ್ಲಿ ಸತ್ಪ್ರಜೆಗಳನ್ನು ರೂಪಿಸಿದ ಶಿಕ್ಷಣ ಸಂಸ್ಥೆಗಳು




■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ತಲೆತಲಾಂತರದಿಂದ ಬಂದ ಆಸ್ತಿಗಳನ್ನು ನಮ್ಮ ಹಿರಿಯರು ದಾನ ನೀಡಿದ್ದರ ಫಲವಾಗಿ ಆರಂಭಗೊಂಡ ಶಿಕ್ಷಣ ಸಂಸ್ಥೆಗಳು ಸಮಾಜದಲ್ಲಿ ಸತ್ಪ್ರಜೆಗಳನ್ನು ರೂಪಿಸಿವೆ ಎಂದು ಪಶ್ಚಿಮ ಬಂಗಾಳ ರಾಜ್ಯದಲ್ಲಿ ಆದಾಯ ತೆ-ರಿಗೆ ಇಲಾಖೆ ಮುಖ್ಯ ಪ್ರಧಾನ ಆಯುಕ್ತರಾಗಿರುವ ವಿಜಯಪುರದ ಶ್ರೀನಿವಾಸ ಬಿದರಿ ಹೇಳಿದರು.

ಆದಾಯ ತೆರಿಗೆ ಇಲಾಖೆಯಲ್ಲಿ ಪ್ರಧಾನ ಆಯುಕ್ತರಿಂದ ಮುಖ್ಯ ಪ್ರಧಾನ ಆಯುಕ್ತರೆಂದು ಬಡ್ತಿ ಪಡೆದಿರುವ ಹಿನ್ನೆಲೆಯಲ್ಲಿ ವಿಜಯಪುರದಲ್ಲಿ ಅವರ ಸ್ನೇಹಿತರು, ಶಾಲಾ-ಕಾಲೇಜು ಸಹಪಾಠಿಗಳು ನೀಡಿದ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ವಿಜಯಪುರದ ದರ್ಬಾರ್, ಪಿಡಿಜೆ, ಬಿಡಿಇ, ಶ್ರೀ ಸಿದ್ದೇಶ್ವರ ಹೈಸ್ಕೂಲ್ ಎಲ್ಲವೂಗಳು ಸಹ 70-100 ವರ್ಷದ ಹಿಂದೆ ಅಂದಿನ ಹಿರಿಯರು ತಮ್ಮ ತಲೆ ತಲಾಂತರದ ಆಸ್ತಿಯನ್ನು ಈ ನಾಡಿನ ಮಕ್ಕಳ ಭವಿಷ್ಯ ಒಳಿತಾಗಲಿ ಎಂದು ದಾನವಾಗಿ ನೀಡಿದ್ದರು. ಅದರ ಫಲವಾಗಿ ಅಂತಹ ಸಂಸ್ಥೆಗಳಲ್ಲಿ ಕಲಿತ ನಮ್ಮಂಥ-ವರು ಉನ್ನತ ಹುದ್ದೆಗೆ ಹೋಗಲು ಸಾಧ್ಯವಾಯಿತು. ಇದಕ್ಕೆ ಕಾರಣರಾದ ಆ ಹಿರಿಯ ಚೇತನಗಳನ್ನು ಸದಾ ಸ್ಮರಿಸಬೇಕು ಎಂದರು.

ಡಾ.ಮಹಾಂತೇಶ ಬಿರಾದಾರ ಮಾತನಾಡಿ, 1992-93 ರಲ್ಲಿ ವಿಜಯಪುರ ಜಿಲ್ಲೆಯಿಂದ ಐ.ಆರ್.ಎಸ್ ಪಾಸಾದ ಮೊದಲ ವ್ಯಕ್ತಿ ಶ್ರೀನಿವಾಸ ಬಿದರಿ ಆಗಿದ್ದಾರೆ. 34 ವರ್ಷಗಳ ಸುಧೀರ್ಘ ಸೇವೆಯಿಂದ ಇಂದು ಪ್ರಧಾನಮಂತ್ರಿ, ವಿತ್ತ ಮಂತ್ರಿಗಳ ಕಾರ್ಯಪಡೆಯಲ್ಲಿ ದೇಶದ ಆರ್ಥಿಕ ನೀತಿ ನಿರೂಪಣೆಗಳನ್ನು ನಿರ್ವಹಿಸುವ ಪ್ರಮುಖ ವ್ಯಕ್ತಿಯಾಗಿದ್ದರೆ. ಇನ್ನೂ ಅವರು ಉನ್ನತ ಸ್ಥಾನಕ್ಕೆ ಹೋಗಲಿದ್ದಾರೆ. ಇದು ವಿಜಯಪುರದವರೆಲ್ಲರಿಗೂ ಹೆಮ್ಮೆಯ, ಅಭಿಮಾನದ ಸಂಗತಿ. ದೇವರಗೆಣ್ಣೂರು ಎಂಬ ಪುಟ್ಟ ಹಳ್ಳಿಯಿಂದ ಬಂದಿರುವ ಇವರು ಇಂದಿಗೂ ವಿಜಯಪುರಕ್ಕೆ ಬಂದರೆ, ಹಳ್ಳಿಯಲ್ಲಿಯೇ ಇರುತ್ತಾರೆ ಮತ್ತು ಹಳೆಯ ಗೆಳೆಯರೊಂದಿಗೆ ಸ್ಫೂರ್ತಿ ಫೌಂಡೇಶನ್ ಮುಖಾಂತರ ಸಾಮಾಜಿಕ ಕಾರ್ಯಗಳನ್ನು ಮಾಡುತ್ತಾರೆ. ಇದು ಇವರ ಮಣ್ಣಿನ ಗುಣ ತೋರಿಸುತ್ತದೆ ಎಂದರು.

### ವಿಜಯಪುರದಲ್ಲಿ ಪಶ್ಚಿಮ ಬಂಗಾಳ ಆದಾಯ ತೆರಿಗೆ ಇಲಾಖೆ ಮುಖ್ಯ ಪ್ರಧಾನ ಆಯುಕ್ತ ಶ್ರೀನಿವಾಸ ಬಿದರಿ ಹೇಳಿಕೆ

ಸಿದ್ದೇಶ್ವರ ಸಹಕಾರಿ ಬ್ಯಾಂಕ್ ಅಧ್ಯಕ್ಷ ರವಿಂದ್ರ ಬಿಜ್ಜರಗಿ ಮಾತನಾಡಿ, ವಿಜಯಪುರದ ವರ್ತಕರ ಮತ್ತು ಎಪಿಎಂಸಿ ಗೆ ಸಂಬಂಧಿಸಿದ ಹಲವಾರು ವ್ಯಾಜ್ಯಗಳನ್ನು ಬಿದರಿ ಅವರ ಗಮನಕ್ಕೆ ತಂದಾಗ ಅವುಗಳಿಗೆ ನ್ಯಾಯಯುತ ಪರಿಹಾರ ದೊರಕಿಸಿದ್ದಾರೆ. ಬಿದರಿ ಮನೆತನ ವಿಜಯಪುರಕ್ಕೆ ಉತ್ತಮ ಕೊಡುಗೆ ನೀಡಿದೆ. ರಾಮಪ್ಪ ಬಿದರಿ ಅವರು ಸಂಸದರಾಗಿ, ಡಾ.ಸಿ.ಆರ್.ಬಿದರಿ, ಡಾ.ಎಲ್.ಎಚ್.ಬಿದರಿ ವೈದ್ಯರಾಗಿ, ಆಶಾ ಬಿದರಿ ಸಾಮಾಜಿ-ಕವಾಗಿ ಅತ್ಯುತ್ತಮ ಸೇವೆ ಸಲ್ಲಿಸಿದ್ದಾರೆ ಎಂದರು.

ವಿಡಿಎ ಅಧ್ಯಕ್ಷ ಡಾ.ಗಂಗಾಧರ ಸಂಬಣ್ಣಿ, ಮಾಜಿ ಅಧ್ಯಕ್ಷ ಚಂದ್ರಕಾಂತ ಶೆಟ್ಟಿ, ಮಾಜಿ ಶಾಸಕ ಪ್ರೊ.ರಾಜು ಆಲಗೂರ, ಅರುಣ ಹುಂಡೇಕಾರ, ಬಸವರಾಜ ಪಾಟೀಲ, ಡಾ.ವಿಜಯ ಪಾಟೀಲ, ವಿಜಯ ಡೋಣಿ, ಪ್ರಕಾಶ ಹಕ್ಕಪಕ್ಕಿ, ಜಯಾನಂದ ತಾಳಿಕೋಟಿ, ಪ್ರವೀಣ ವಾರದ, ವೀರಣ್ಣ ಹುಂಡೇಕಾರ, ಆನಂದ ಮಂಗಳವೇಡೆ, ದಾದು ತಿವಾರಿ, ಸುಭಾಸ ಬಗಲಿ ಸೇರಿದಂತೆ ಮತ್ತಿತರ ಗಣ್ಯರು ಉಪಸ್ಥಿತರಿದ್ದರು.




ಎಸ್.ಎನ್.ಕಲಾವಂತ ಗುರುಮಾತೆಯ ವಯೋನಿವೃತ್ತಿ ಸಮಾರಂಭ ತಿಕೋಟಾ: ಎಸ್.ಎನ್. ಕಲಾವಂತ ಶಿಕ್ಷಕಿಯವರ ಸೇವಾ ಜೀವನವು ಅತ್ಯಂತ ಸಾರ್ಥಕ ಮತ್ತು ಆದರ್ಶಪ್ರಾಯವಾಗಿದೆ. ಅವರು ತಮ್ಮ ಜ್ಞಾನ, ಅನುಭವ, ಶಿಸ್ತು ಮತ್ತು ಪ್ರೀತಿಯ ಮೂಲಕ ಅನೇಕ ವಿದ್ಯಾರ್ಥಿಗಳ ಭವಿಷ್ಯವನ್ನು ರೂಪಿಸಿದ್ದಾರೆ. ಶಿಕ್ಷಕಿಯಾಗಿ ಅವರು ಕೇವಲ ಪಾಠ ಬೋಧನೆ ಮಾಡದೆ, ಮಕ್ಕಳಲ್ಲಿ ಸಂಸ್ಕಾರ, ಶಿಸ್ತು ಮತ್ತು ಉತ್ತಮ ಮೌಲ್ಯಗಳನ್ನು ಬೆಳೆಸಿದ ಮಹಾನ್ ಕಾರ್ಯ ಮಾಡಿದ್ದಾರೆ ಎಂದರು.

# ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಗುತ್ತಿಗೆದಾರರ ಸಂಘದ ಪ್ರತಿಭಟನೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಬಾಂಡ್ (ನೋಟರಿ) ಮೂಲಕ ಖರೀದಿಸಿದ ಭಕ್ಷೀಸ್ ಪತ್ರಗಳು, ಉಪನೊಂದಣಾಧಿಕಾ-ರಿಗಳ ಕಚೇರಿಯಲ್ಲಿ ನೋಂದಾಯಿತ ಗುಂಟಾ ಪ್ಲಾಟ್‌ಗಳಲ್ಲಿ ನಿರ್ಮಿಸಿರುವ ಹಾಗೂ ನಿರ್ಮಾಣ ಹಂತದಲ್ಲಿರುವ ಮನೆಗಳಿಗೆ ತಾತ್ಕಾಲಿಕ, ಶಾಶ್ವತ ಮತ್ತು ವಾಣಿಜ್ಯ ವಿದ್ಯುತ್ ಸಂಪರ್ಕ ನೀಡದಿರುವುದನ್ನು ಖಂಡಿಸಿ ಕರ್ನಾಟಕ ರಾಜ್ಯ ಅನುಮತಿ ಪಡೆದ ವಿದ್ಯುತ್ ಗುತ್ತಿಗೆದಾರರ ಸಂಘದಿಂದ ಬುಧವಾರ ಪ್ರತಿಭಟನೆ ನಡೆಸಿ ಬಳಿಕ ಜಿಲ್ಲಾಧಿಕಾರಿಗಳ ಮುಖಾಂತರ ಮಾನ್ಯ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಈ ವೇಳೆ ಗುತ್ತಿಗೆದಾರರ ಸಂಘದ ಕೇಂದ್ರ ಕಾರ್ಯಕಾರಿ ಸಮಿತಿ ಸದಸ್ಯ ಸೈಯದ ಯಾಸೀನ್ ಎಲ್. ಗುಲ್ಬರ್ಗಾ ಮಾತನಾಡಿ, 03-07-2025 ರಂದು ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ 1200 ಚದರ ಅಡಿ ವರೆಗಿನ ಕಟ್ಟಡಗಳಿಗೆ ಓಸಿ ಹಾಗೂ ಸಿಸಿ ಪಡೆಯುವುದರಿಂದ ವಿನಾಯಿತಿ ನೀಡುವಂತೆ ಸರ್ಕಾರ ಆದೇಶ ಹೊರಡಿಸಿತ್ತು. ಆದರೆ ಆ ಆದೇಶಗಳನ್ನು ಉಲ್ಲಂಘಿಸಿ ಹೆಸ್ಕಾಂ ಅಧಿಕಾರಿಗಳು ವಿದ್ಯುತ್ ಸಂಪರ್ಕ ಮಂಜೂರು ಮಾಡುವಲ್ಲಿ ತೊಂದರೆ ನೀಡುತ್ತಿದ್ದಾರೆ ಎಂದು ಆರೋಪಿಸಿದರು.

ಗುಂಟಾ ಪ್ಲಾಟ್‌ಗಳಲ್ಲಿ ನಿರ್ಮಿಸಿರುವ ಹಾಗೂ ನಿರ್ಮಾಣ ಹಂತದಲ್ಲಿರುವ ಮನೆಗಳಿಗೆ ತಾತ್ಕಾಲಿಕ, ಶಾಶ್ವತ ಹಾಗೂ ವಾಣಿಜ್ಯ ವಿದ್ಯುತ್ ಸಂಪರ್ಕ ಕಲ್ಪಿಸದೇ ಇರುವುದರ ವಿರುದ್ಧ ಹಾಗೂ ವಿದ್ಯುತ್ ಗುತ್ತಿಗೆದಾರರ ವಿವಿಧ ಸಮಸ್ಯೆಗಳ ಪರಿಹಾರಕ್ಕಾಗಿ ಇಂದು ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದರು.



ಈ ಸಂದರ್ಭದಲ್ಲಿ ಹೆಸ್ಕಾಂ ನಗರ ಉಪವಿಭಾಗ-1ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ದೊಡ್ಡಪ್ಪ ಮೂಲಿಮನಿ ಹಾಗೂ ನಗರ ಉಪವಿಭಾಗ-2ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಅಕ್ಷರಬಾಶಾ ಕುರಿ ಅವರ ಕಾರ್ಯವೈಖರಿಯನ್ನು ಸಂಘ ಪದಾಧಿಕಾರಿಗಳು ಖಂಡಿಸಿದರು.

ಪ್ರತಿಭಟನೆಯಲ್ಲಿ ಸಂಘದ ಪದಾಧಿಕಾರಿಗಳು, ಸದಸ್ಯರು, ವಿದ್ಯುತ್ ಸಂಪರ್ಕಕ್ಕಾಗಿ ಕಾಯುತ್ತಿರುವ ಗ್ರಾಹಕರು ಹಾಗೂ ವಿವಿಧ ರೈತ ಸಂಘಗಳ ಪದಾಧಿಕಾ-ರಿಗಳು ಭಾಗವಹಿಸಿದ್ದರು.

# 7 ಪೆಡ್ಲರ್‌ಗಳಿಂದ ರೂ.15.78 ಲಕ್ಷ ಮೌಲ್ಯದ ಗಾಂಜಾ ವಶ :ಎಸ್ಪಿ ನಿಂಬರಗಿ

## ವಿಜಯಪುರ ಜಿಲ್ಲೆಯಲ್ಲಿ ವಿಶೇಷ ಮಾದಕ ದ್ರವ್ಯ ವಿರೋಧಿ ಕಾರ್ಯಾಚರಣೆ। 61.770 ಕೆ.ಜಿ ಗಾಂಜಾ ವಶಕ್ಕೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜಿಲ್ಲೆಯನ್ನು ಮಾದಕ ದ್ರವ್ಯ ಮುಕ್ತವಾಗಿಸಲು ಜಿಲ್ಲಾ ಪೊಲೀಸ್ ಇಲಾಖೆ ನಿರಂತರವಾಗಿ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳುತ್ತಿದೆ. ಇದರ ಭಾಗವಾಗಿ ಜೂನ್ 1ರಿಂದ ಜೂನ್ 16, 2026ರವರೆಗೆ ವಿಶೇಷ ಡ್ರೈವ್ ನಡೆಸಿ, ಮಾದಕ ದ್ರವ್ಯಗಳ ಮಾರಾಟ ಮತ್ತು ಸೇವನೆಯಲ್ಲಿ ತೊಡಗಿದ್ದವರ ವಿರುದ್ಧ ಪ್ರಕರಣಗಳನ್ನು ದಾಖಲಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ತಿಳಿಸಿದ್ದಾರೆ.

ಈ ಕುರಿತು ಬುಧವಾರ ಪತ್ರಿಕಾ ಹೇಳಿಕೆ ನೀಡಿದ ಅವರು, ಪೊಲೀಸರ ಕಾರ್ಯಾಚರಣೆಯಲ್ಲಿ ವಿವಿಧ ಠಾಣೆಗಳ ವ್ಯಾಪ್ತಿಯಲ್ಲಿ ಒಟ್ಟು 7 ಪೆಡ್ಲರ್‌ಗಳ ವಿರುದ್ಧ ಪ್ರಕರಣಗಳು ದಾಖಲಾಗಿದ್ದು, 61.770 ಕೆ.ಜಿ. ಗಾಂಜಾ ವಶಪಡಿಸಿಕೊಳ್ಳಲಾಗಿದ್ದು, ವಶಪಡಿಸಿಕೊಂಡ ಗಾಂಜಾದ ಅಂದಾಜು ಮೌಲ್ಯ 15.78 ಲಕ್ಷ ಎಂದು ತಿಳಿಸಿದ್ದಾರೆ.

ಪೆಡ್ಲರ್‌ಗಳ ವಿರುದ್ಧ ಸಿಂದಗಿ ಠಾಣೆ ವ್ಯಾಪ್ತಿಯಲ್ಲಿ 34.400 ಕೆ.ಜಿ. ಗಾಂಜಾ ಪತ್ತೆ, ಮನಗೂಳಿ ಠಾಣೆ ವ್ಯಾಪ್ತಿಯಲ್ಲಿ 15.060 ಕೆ.ಜಿ. ಗಾಂಜಾ ವಶ, ಗೋಳಗುಮ್ಮಟ ಠಾಣೆಯಲ್ಲಿ ಎರಡು ಪ್ರತ್ಯೇಕ ಪ್ರಕರಣಗಳಲ್ಲಿ 11.295 ಕೆ.ಜಿ. ಗಾಂಜಾ ವಶಪಡಿಸಿಕೊಂಡಿರುವುದು ಸೇರಿದಂತೆ ದೇವರಹಿಪ್ಪರಗಿ, ಆಲಮೇಲ ಹಾಗೂ ಬಸವನ ಬಾಗೇವಾಡಿ ಠಾಣೆಗಳಲ್ಲಿಯೂ ಗಾಂಜಾ ಮಾರಾಟ ಪ್ರಕರಣಗಳನ್ನು ದಾಖಲಿಸಲಾಗಿದೆ ಎಂದು ಎಸ್ಪಿ ಲಕ್ಷ್ಮಣ ನಿಂಬರಗಿ ವಿವರಿಸಿದ್ದಾರೆ.


ಮಾದಕ ದ್ರವ್ಯಗಳ ಮಾರಾಟ ಹಾಗೂ ಸೇವನೆಗೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ಮುಂದೆಯೂ ಇಂತಹ ವಿಶೇಷ ಕಾರ್ಯಾಚರಣೆಗಳನ್ನು ಮುಂದುವರಿಸಲಿದ್ದು, ಸಾರ್ವಜನಿಕರು ಯಾವುದೇ ಮಾಹಿತಿ ದೊರೆತಲ್ಲಿ ಪೊಲೀಸರಿಗೆ ತಿಳಿಸುವಂತೆ ಎಸ್ಪಿ ಲಕ್ಷ್ಮಣ ನಿಂಬರಗಿ ಮನವಿ ಮಾಡಿದ್ದಾರೆ.

### ವ್ಯಸನಿಗಳ ವಿರುದ್ಧವೂ ಕ್ರಮ

ವಿಶೇಷ ಕಾರ್ಯಾಚರಣೆಯ ವೇಳೆ ಮನಗೂಳಿ, ನಿಡಗುಂದಿ, ಮುದ್ದೇಬಿಹಾಳ, ತಾಳಿಕೋಟೆ ಹಾಗೂ ಬಬಲೇಶ್ವರ ಠಾಣೆ ವ್ಯಾಪ್ತಿಯಲ್ಲಿ ಒಟ್ಟು 6 ಮಂದಿ ಗಾಂಜಾ ಸೇವನೆ (ವ್ಯಸನ) ಪ್ರಕರಣಗಳಲ್ಲಿ ಬಂಧಿತರಾಗಿದ್ದು, ಅವರ ವಿರುದ್ಧ ಎನ್‌ಡಿಪಿಎಸ್ ಕಾಯ್ದೆಯಡಿ ಪ್ರಕರಣ ದಾಖಲಿಸಲಾಗಿದೆ ಎಂದು ಎಂದು ಎಸ್ಪಿ ಲಕ್ಷ್ಮಣ ನಿಂಬರಗಿ ತಿಳಿಸಿದ್ದಾರೆ.

# ಬಸ್ ಪಾಸ್, ಮಾಧ್ಯಮ ಸಂಜೀವಿನಿ ಯೋಜನೆ ಶೀಘ್ರ ಜಾರಿಯಾಗಲಿ

■ ಉದಯರಶ್ಮಿ ದಿನಪತ್ರಿಕೆ



ಬೆಂಗಳೂರು: ಗ್ರಾಮೀಣ ಪತ್ರಕರ್ತರಿಗಾಗಿ ರಾಜ್ಯ ಸರ್ಕಾರ ಜಾರಿಗೊಳಿಸಿರುವ ಉಚಿತ ಬಸ್ ಪಾಸ್ ಯೋಜನೆಗೆ ಅರ್ಜಿ ಸಲ್ಲಿಕೆ ವೇಳೆ ಎದುರಾಗುತ್ತಿರುವ ತಾಂತ್ರಿಕ ಸಮಸ್ಯೆಗಳನ್ನು ತಕ್ಷಣ ಬಗೆಹರಿಸಿ ಪತ್ರಿಕಾ ದಿನಾಚರಣೆ ವೇಳೆಗೆ ಅರ್ಹ ಪತ್ರಕರ್ತರಿಗೆ ಪಾಸ್ ವಿತರಿಸಬೇಕು ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಆಗ್ರಹಿಸಿದ್ದಾರೆ.

ಈ ಕುರಿತು ಸರ್ಕಾರಕ್ಕೆ ಮನವಿ ಸಲ್ಲಿಸಿರುವ ಅವರು, ಮೊದಲ ಹಂತದಲ್ಲಿ ಸುಮಾರು 5,500 ಪತ್ರಕರ್ತರಿಗೆ ಯೋಜನೆಯ ಪ್ರಯೋಜನ ದೊರೆಯಲಿದ್ದು, ಈ ನಿಟ್ಟಿನಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕಾರ್ಯೋನ್ಮುಖವಾಗಿ ಕೆಲಸ ಮಾಡುತ್ತಿರುವುದು ಸಂತಸದ ಸಂಗತಿ ಎಂದು ಹೇಳಿದ್ದಾರೆ.

ಗ್ರಾಮೀಣ ಪತ್ರಕರ್ತರ ಉಚಿತ ಬಸ್ ಪಾಸ್ ಯೋಜನೆ ಜಾರಿಗೊಳಿಸಿರುವುದಕ್ಕೆ ಸರ್ಕಾರಕ್ಕೆ ಧನ್ಯವಾದವನ್ನು ಅವರು ಸಲ್ಲಿಸಿದ್ದಾರೆ

ಆದರೆ, ಬಸ್ ಪಾಸ್ ಯೋಜನೆಗೆ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಕೆಲವು ತಾಂತ್ರಿಕ ಸಮಸ್ಯೆಗಳು ಎದುರಾಗುತ್ತಿದ್ದು, ಅವುಗಳನ್ನು ಕೂಡಲೇ ಪರಿಹರಿಸಿ ಪತ್ರಿಕಾ ದಿನಾಚರಣೆ ಹೊತ್ತಿಗೆ ಅರ್ಜಿ ಸಲ್ಲಿಸಿದ ಎಲ್ಲ ಅರ್ಹ ಪತ್ರಕರ್ತರಿಗೆ ಬಸ್ ಪಾಸ್ ವಿತರಣೆ ಮಾಡಬೇಕು ಎಂದು ಒತ್ತಾಯಿಸಿದ್ದಾರೆ.

ಇದೇ ವೇಳೆ, ಮುಖ್ಯಮಂತ್ರಿ ಮಾಧ್ಯಮ ಸಂಜೀವಿನಿ ಯೋಜನೆಯನ್ನು ಸರ್ಕಾರ ಘೋಷಿಸಿ ಜಾರಿಗೊಳಿಸಿದ್ದರೂ ಅದರ ಪ್ರಯೋಜನ ಇನ್ನೂ ಪತ್ರಕರ್ತರಿಗೆ ಸಮರ್ಪಕವಾಗಿ ತಲುಪಿಲ್ಲ ಎಂದು ಅವರು ಗಮನ ಸೆಳೆದಿದ್ದಾರೆ.

### ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಆಗ್ರಹ

ಹೀಗಾಗಿ, ಮಾಧ್ಯಮ ಸಂಜೀವಿನಿ ಯೋಜನೆಯನ್ನೂ ಪತ್ರಿಕಾ ದಿನಾಚರಣೆ ವೇಳೆಗೆ ಪೂರ್ಣ ಪ್ರಮಾಣದಲ್ಲಿ ಅನುಷ್ಠಾನಗೊಳಿಸಿ ಪತ್ರಕರ್ತರಿಗೆ ಸೌಲಭ್ಯ ಕಲ್ಪಿಸಬೇಕು ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಸರ್ಕಾರವನ್ನು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ) ಆಗ್ರಹಿಸಿದೆ.

# ಕೊನೆಯಿರದ ಸಾಧನೆಗೆ ಸಮರ್ಪಣಾ ಭಾವ

**ಜಯ್ ನುಡಿ**

**(ವ್ಯಕ್ತಿತ್ವ ವಿಕಸನ ಕುರಿತ ಲೇಖನ ಮಾಲಿಕೆ)**

■ **ಉದಯರಶ್ಮಿ ದಿನಪತ್ರಿಕೆ**

ಸಾಮಾನ್ಯ ಮಹಿಳೆಯಾಗಿದ್ದ ತಿಮ್ಮಕ್ಕನವರು ಪರಿಸರ ರಕ್ಷಣೆಗೆ ತೋರಿದ ನಿಷ್ಠೆ ನಮಗೆಲ್ಲ ಮಾದರಿ. ತಮಗೆ ಮಕ್ಕಳಿಲ್ಲದಿದ್ದರೂ ರಸ್ತೆಯ ಇಕ್ಕೆಲಗಳಲ್ಲಿ ನೂರಾರು ಆಲದ ಸಸಿಗಳನ್ನು ನೆಟ್ಟು, ಅವುಗಳನ್ನು ತಮ್ಮ ಸ್ವಂತ ಮಕ್ಕಳಂತೆ ನೀರುಣಿಸಿ ಬೆಳೆಸಿದರು. ಯಾವುದೇ ಫಲಾಪೇಕ್ಷೆಯಿಲ್ಲದೆ ದಶಕಗಳ ಕಾಲ ಅವರು ತೋ-ರಿದ ಸಮರ್ಪಣೆಗೆ ಜಗತ್ತು ತಲೆಬಾಗಿದೆ.

ನಮ್ಮಲ್ಲಿ ಬಹುತೇಕರು ಯಾವುದೇ ಒಂದು ಗುರಿಯನ್ನು ನಿರ್ಧರಿಸುತ್ತಾರೆ. ಅದನ್ನು ಅತಿಯಾದ ಉತ್ಸಾಹದಿಂದ ಆರಂಭಿಸುತ್ತಾರೆ. ಗುರಿಯ ಸಾಧನೆಯಲ್ಲಿ ಬರುವ ಅಡೆತಡೆಗಳಿಗೆ ಹೆದರಿ ಆ ಗುರಿಯನ್ನು ಅಲ್ಲಿಯೇ ಕೈಬಿಡುತ್ತಾರೆ. ಹೀಗೆ ಹತ್ತಾರು ಸಲ ಮಾಡಿ ನನ್ನಿಂದ ಯಾವುದೂ ಆಗುತ್ತಿಲ್ಲವೆಂದು ಬೇಸರಿಸುತ್ತಾರೆ. ವಾಸ್ತವದಲ್ಲಿ ಯಶಸ್ಸನ್ನು ಸಾಧಿಸಲು ಬುದ್ಧಿವಂತಿಕೆಯಿಂದ ಕೆಲಸ ಮಾಡಿದರೆ ಸಾಲದು. ಅದರೊಂದಿಗೆ ಸಮರ್ಪಣಾ ಭಾವ ಬೇಕು. ಮಾಡುವ ಕೆಲಸದ ಪ್ರತಿ ನಿಷ್ಠೆ ಬೇಕು. ನಿಷ್ಠೆ ಎಂದರೆ ಕೈಗೆತ್ತಿಕೊಂಡ ಕೆಲಸವನ್ನು ಯಾವುದೇ ಅಡೆತಡೆಗಳು ಬಂದರೂ ಅರ್ಧಕ್ಕೆ ನಿಲ್ಲಿಸದೆ, ಗುರಿ ತಲುಪುವವರೆಗೆ ಶ್ರಮಿಸುವುದು. ನಿಷ್ಠೆಯಿಂದ ಗುರಿಯನ್ನು ಬೆನ್ನು ಹತ್ತಿದವರೆಲ್ಲ ದೊಡ್ಡ ಸಾಧಕರಾಗಿ ಹೊರ ಹೊಮ್ಮಿದ್ದಾರೆ.

ಸಮರ್ಪಣಾ ಭಾವ ಎನ್ನುವುದು ಒಂದೇ ದಿನದಲ್ಲಿ ಬರುವಂಥದ್ದಲ್ಲ. ಇದು ನಿರಂತರ ಅಭ್ಯಾಸದಿಂದ ಸಿದ್ಧಿಸುವ ಗುಣ. ಹಾಗಿದ್ದರೆ ಸಮರ್ಪಣಾ ಭಾವದಿಂದ ಗುರಿಯತ್ತ ಮುನ್ನಡೆಯಲು ಪೂರಕ ಅಂಶಗಳಾವವು ತಿಳಿಯೋಣ ಬನ್ನಿ.

**ಗುರಿ**

'ಯಾರಿಗೆ ಜೀವನದಲ್ಲಿ ಸ್ಪಷ್ಟವಾದ ಗುರಿ ಇರುವುದಿಲ್ಲವೋ, ಅವರು ಬೇರೆಯವರ ಗುರಿಯನ್ನು ತಲುಪಿಸಲು ಕೇವಲ ಕೆಲಸಗಾರರಾಗಿ ಉಳಿಯುತ್ತಾರೆ.' ಆದ್ದರಿಂದ ಮೊತ್ತಮೊದಲನೆಯದಾಗಿ ನಿನಗೇನು ಬೇಕು ಎನ್ನುವುದರಲ್ಲಿ ನಿನಗೆ ಸ್ಪಷ್ಟತೆ ಇರಬೇಕು. ನಿನ್ನ ಮನಸ್ಸಿನಲ್ಲಿ ನಿಖರವಾದ ಚಿತ್ರಣವಿರಬೇಕು. ಗುರಿ ಸ್ಪಷ್ಟವಾಗಿದ್ದಾಗ ಮಾತ್ರ ಅದಕ್ಕಾಗಿ ಸಂಪೂರ್ಣವಾಗಿ ಸಮರ್ಪಿಸಿಕೊಳ್ಳಲು ಸಾಧ್ಯವಾಗುತ್ತದೆ. ಯಾವುದೇ ಒಂದು ಗುರಿಯನ್ನು ತಲುಪಲು ಕೇವಲ ಆಲೋಚನೆ ಸಾಲದು, ಅದಕ್ಕೆ ತಕ್ಕ ಕಠಿಣ ಪರಿಶ್ರಮ ಮತ್ತು ಬದ್ಧತೆ ಅತ್ಯಗತ್ಯ. 'ಸಿದ್ಧಾಂತಕ್ಕಿಂತ ಸಮರ್ಪಣೆ ಮತ್ತು ನಿರಂತರ ಪ್ರಯತ್ನ ಮುಖ್ಯ. ಕಠಿಣ ಪರಿಶ್ರಮವಿಲ್ಲದೇ ಯಾವುದೇ ಹಕ್ಕು ಅಥ-'ವಾ ಸ್ವಾತಂತ್ರ್ಯವನ್ನು ಉಳಿಸಿಕೊಳ್ಳಲು ಸಾಧ್ಯವಿಲ್ಲ.' ಎಂದಿದ್ದಾರೆ





ಡಾ. ಬಿ.ಆರ್. ಅಂಬೇಡ್ಕರ್ ಗುರಿ ತಲುಪಲು ನೂರಾರು ದಾ-ರಿಗಳು ಇರಬಹುದು. ಆ ದಾರಿಯಲ್ಲಿ ಸಾಗಲು ನಿಮ್ಮಲ್ಲಿ ಸಮರ್ಪಣಾ ಭಾವ ಇರಬೇಕು. ಅದರೊಂದಿಗೆ ಪರಿಶ್ರಮವೂ ಬೇಕು. ಅಂತೆಯೇ 'ಗುರಿ ತಲುಪುವ ಹಾದಿಯಲ್ಲಿ ನೂರಾರು ನಿಂದೆಯ ನುಡಿಗಳು ಟೀಕೆಗಳು ಬರಬಹುದು. ನೆನಪಿಡಿ ಕಲ್ಲು ಹೊಡೆಯುವುದು ಹಣ್ಣು ಕೊಡುವ ಮರಕ್ಕೆ ಮಾತ್ರ.' ಸೋಲು ಎಂಬುದು ಗುರಿಗೆ ಮುಕ್ತಾಯವಲ್ಲ, ಹೊಸ ಅಧ್ಯಾಯದ ಆರಂಭ ಎನ್ನುವುದನ್ನು ಮರೆಯುವಂತಿಲ್ಲ.

**ಬದ್ಧತೆ ಇರಲಿ**

ಅಂದುಕೊಂಡದ್ದನ್ನು ಸಾಧಿಸಲು ಕನಸು ಕಾಣುತ್ತ ಕುಳಿತರೆ ನನಸಾಗದು. ಕೇವಲ ಆಸೆಯನ್ನು ಹೊತ್ತು ತಿರುಗುವುದರಿಂದ ಗುರಿಯ ಕನಸು ಕಾಣುವುದರಿಂದ ಯಶಸ್ಸು ಸಿಗದು. ಅದಕ್ಕೆ ಬದ್ಧತೆಯ ಬೆಂಬಲ ಬೇಕೇ ಬೇಕು. 'ಆಸೆ ಪಡುವುದು ಸುಲಭ ಆದರೆ ಆ ಆಸೆಯನ್ನು ಸಾಧಿಸುವ ತನಕ ಪ್ರಯತ್ನಿಸುವುದೇ ಬದ್ಧತೆ.' ನೀವು ಎಷ್ಟೇ ಉತ್ತಮ ಯೋಜನೆಗಳನ್ನು ಹೊಂದಿದ್ದರೂ ಅವು ಕೇವಲ ನಿಮ್ಮ ಮನಸ್ಸಿನಲ್ಲಿ ಇಲ್ಲವೇ ಕಾಗದದ ಮೇಲೆ ಉಳಿದುಬಿಡುತ್ತವೆ. ಯೋಜನೆಗಳ ಜತೆಗೆ ಬದ್ಧತೆ ಇರಬೇಕು. 'ಏನೇ ಆಗಲಿ ನಾನು ಈ ಕೆಲಸವನ್ನು ಪೂರ್ಣಗೊಳಿಸುತ್ತೇನೆ' ಎಂಬ ಬದ್ಧತೆ ಇದ್ದರೆ ಮಾತ್ರ ಸಮಯಕ್ಕೆ ಸರಿಯಾಗಿ ಗುರಿ ತಲುಪಲು ಸಾಧ್ಯವಾಗುವುದು. ಸರ್ ಎಂ ವಿಶ್ವೇಶ್ವರಯ್ಯ ಹೇಳಿದಂತೆ 'ನೀವು ಯಾವುದೇ ಕೆಲಸವನ್ನು ಮಾಡಿದರೂ, ಅದನ್ನು ಜಗತ್ತಿನಲ್ಲೇ ಅತ್ಯುತ್ತಮವಾಗಿ ಮಾಡಲು ನಿಮ್ಮನ್ನು ನೀವು ಸಮರ್ಪಿಸಿಕೊಳ್ಳಿ.'

**ಪ್ರೀತಿಸಿ**

ಕೆಲಸದ ಬಗ್ಗೆ ಪ್ರೀತಿ ಇರುವುದು ಯಶಸ್ವಿ ಜೀವನಕ್ಕೆ ಬುನಾದಿಯೇ ಸರಿ. ಕೆಲಸವನ್ನು ಹೊರಗಿನ ಒತ್ತಡಕ್ಕಾಗಿ ಇಲ್ಲವೇ ಹಣಕ್ಕಾಗಿ ಮಾಡುವುದು ಸಂತೃಪ್ತಿಯನ್ನು ತರದು. ಕೆಲಸದ ಮೇಲಿನ ಪ್ರೀತಿ ಬೇಸರವನ್ನು ದೂರವಾಗಿಸಿ ಉತ್ಸಾಹದಿಂದ ಕಾರ್ಯನಿರ್ವಹಿಸಲು ಸಹಕಾರಿ. 'ನಿಮ್ಮ ಕೆಲಸವನ್ನು ನೀವು ಪ್ರೀತಿಸಿ, ಆಗ ನಿಷ್ಠೆ ಮತ್ತು ಸಮರ್ಪಣೆ ತನ್ನಿಂದ ತಾನೇ ಬರುತ್ತದೆ.' ಎನ್ನುವ ಕಲಾಂರವರ ನುಡಿಗಳಂತೆ ಕೆಲಸ ಪ್ರೀತಿಸಿದರೆ ಸಮರ್ಪಣೆ ಅದನ್ನು ಹಿಂಬಾಲಿಸುತ್ತದೆ. ಸಾಧಕರಾರೂ ಮೊದಲಿನಿಂದ ಅಸಾಮಾನ್ಯರಾಗಿರಲಿಲ್ಲ. ಆದರೆ ಅವರು ತಮ್ಮ ಗುರಿಯತ್ತ ತೋರಿದ ಸಮರ್ಪಣಾ ಭಾವ ಅವರನ್ನು ಅಸಾಮಾನ್ಯ ಸಾಧಕರನ್ನಾಗಿಸಿತು. ಪ್ರೀತಿಯಿಂದ ಮಾಡುವ ಕೆಲಸದಲ್ಲಿ ಹೊಸ ಆಲೋಚನೆಗಳು ಕಷ್ಟದ ಸಮಸ್ಯೆಗಳಿಗೆ ಪರಿಹಾರ ಒದಗಿಸುತ್ತವೆ. ನಮ್ಮ ವೃತ್ತಿ ಅಥವಾ ಕರ್ತವ್ಯದ ಮೇಲಿರುವ ನಿಷ್ಠೆ ಮತ್ತು ಸಮರ್ಪಣಾ ಭಾವವೇ ನಮಗೆ ಸಮಾಜದಲ್ಲಿ ಅತ್ಯುನ್ನತ ಗೌರವ




ತಂದುಕೊಡುತ್ತದೆ.

**ಶ್ರಮವಹಿಸಿ**

'ನಿನ್ನ ಕಷ್ಟಕ್ಕೆ ನೀನೇ ಹೆಗಲಾಗು. ಅನ್ಯರ ದಾರಿ ಕಾಯದಿರು. ನಿನ್ನ ಗುರಿಯ ಕಡೆಗೆ ನಿನ್ನದೇ ನಡಿಗೆಯಿರಲಿ.' ಎಂದಿದ್ದಾರೆ ಕವಿ ಕುವೆಂಪು. ಇದನ್ನು ಹೀಗೂ ಹೇಳಬಹುದು ನಿಮ್ಮ ಗುರಿ ನಿಮ್ಮದಾಗಿರಲಿ, ಅದನ್ನು ತಲುಪುವ ಶ್ರಮವೂ ನಿಮ್ಮದೇ ಆಗರಿಲಿ. ಯಶಸ್ಸು ಸಿಗಬೇಕಾದರೆ ಇತರರ ಮೇಲೆ ಅವಲಂಬಿತರಾಗದೆ, ನಮ್ಮ ಕೆಲಸಕ್ಕೆ ನಾವೇ ಸಂಪೂರ್ಣವಾಗಿ ಬದ್ಧರಾಗಿರಬೇಕು. 'ಬಲವು ದೈಹಿಕ ಸಾಮರ್ಥ್ಯದಿಂದ ಬರುವುದಿಲ್ಲ. ಅದು ಅಚಲವಾದ ಇಚ್ಛಾಶಕ್ತಿ ಮತ್ತು ಸಮರ್ಪಣೆಯಿಂದ ಬರುತ್ತದೆ.' ಎನ್ನುವ ಮಹಾತ್ಮಾ ಗಾಂಧೀಜಿಯವರ ನುಡಿಯಂತೆ ದೈಹಿಕವಾಗಿ ಎಷ್ಟೇ ಬಲಶಾಲಿಯಾದಿದ್ದರೂ, ಮನಸ್ಸಿನಲ್ಲಿ ಕೆಲಸದ ಕಡೆಗೆ ದೃಢವಾದ ಬದ್ಧತೆ ಇಲ್ಲದಿದ್ದರೆ ಸಾಧನೆ ಮಾಡಲು ಸಾಧ್ಯವಿಲ್ಲ.

**ಗಮನವಿರಲಿ**

'ನಿಮ್ಮ ಗಮನ ಯಾವುದರ ಮೇಲಿರುತ್ತದೆಯೋ ಅಲ್ಲಿಗೆ ನಿಮ್ಮ ಶಕ್ತಿ ಹರಿಯುತ್ತದೆ. ಮತ್ತು ಅಲ್ಲಿ ಯಶಸ್ಸು ಸೃಷ್ಟಿಯಾಗುತ್ತದೆ.'



ಗಮನದ ಕೊರತೆ ಇದ್ದರೆ ಯಶಸ್ಸು ಸಿಗುವುದು ಕಷ್ಟ. ಇಂದು ಮೊಬೈಲ್ ಯುಗ ಸಾಮಾಜಿಕ ಜಾಲತಾಣಗಳಂತಹ ಹತ್ತಾರು ವಿಚಲನಗಳ ನಡುವೆ ಗಮನವನ್ನು ಒಂದೇ ಕಡೆ ಕೇಂದ್ರೀಕ-ರಿಸುವುದು ಕಷ್ಟದ ಕೆಲಸವೆನಿಸುತ್ತದೆ. ಆದರೆ ಒಂದೇ ಕೆಲಸದ ಮೇಲೆ ಗಮನವಿಟ್ಟಾಗ ಮನಸ್ಸು ಶಾಂತವಾಗುತ್ತದೆ. ಮತ್ತು ಮಾನಸಿಕ ಸಾಮರ್ಥ್ಯವೂ ಹೆಚ್ಚುತ್ತದೆ. ಯಾವಾಗ ಒಂದು ವಿಷಯದ ಮೇಲೆ ಆಳವಾಗಿ ಗಮನ ಹರಿಸುತ್ತೇವೆಯೋ ಅಲ್ಲಿ ಸೃಜನಶೀಲ ಪರಿಹಾರಗಳು ದೊರೆಯುತ್ತವೆ. ಸಣ್ಣ ಕೆಲಸವಿರಲಿ ಅಥವಾ ದೊಡ್ಡ ಕೆಲಸವಿರಲಿ, ಅದರಲ್ಲಿ ಪರಿಪೂರ್ಣತೆ ಸಾಧಿಸಲು ನಮ್ಮ ಪೂರ್ಣ ಗಮನವನ್ನು ನೀಡಬೇಕು. ನಿಮ್ಮ ಇಡೀ ಮನಸ್ಸು, ಶರೀರ ಮತ್ತು ಶಕ್ತಿಯನ್ನು ಒಂದೇ ಗುರಿಗೆ ಸಂಪೂರ್ಣವಾಗಿ ಸಮರ್ಪಿಸಿದಾಗ ಮಾತ್ರ ಯಶಸ್ಸು ಸಾಧ್ಯ.

ಉತ್ಸಾಹವಿರಲಿ

ಉತ್ಸಾಹವಿಲ್ಲದಿದ್ದರೆ ಯಾವ ಕೆಲಸದಲ್ಲೂ ಉತ್ತಮ ಫಲಿತಾಂಶ ಪಡೆದುಕೊಳ್ಳುವುದು ದುರ್ಲಭ. ಸಾಧಕರೆಲ್ಲರೂ ಈ ರೀತಿಯ ಉತ್ಸಾಹದ ಮಹತ್ವವನ್ನು ಅರಿತವರೆ. ಇದನ್ನೇ ಸ್ವಾಮಿ ವಿವೇಕಾನಂದರು ಹೀಗೆ ಹೇಳಿದ್ದಾರೆ. 'ಒಂದು ಆಲೋಚನೆಯನ್ನು ತೆಗೆದುಕೊಳ್ಳಿ. ಆ ಒಂದು ಆಲೋಚನೆಯನ್ನೇ ನಿಮ್ಮ ಜೀವನವಾಗಿಸಿ. ಅದರ ಬಗ್ಗೆಯೇ ಯೋಚಿಸಿ, ಅದರ ಕನಸು ಕಾಣಿ, ಆ ಆಲೋಚನೆಯಲ್ಲೇ ಬದುಕಿ.' 'ನಿಮ್ಮ ಕೆಲಸಕ್ಕೆ ನೀವು ಕೈಮುಗಿದರೆ ಬೇರೆ ಯಾರಿಗೂ ಕೈಮುಗಿಯುವ ಅಗತ್ಯವಿರುವುದಿಲ್ಲ. ಆದರೆ ನಿಮ್ಮ ಕೆಲಸವನ್ನು ನೀವು ನಿರ್ಲಕ್ಷಿಸಿದರೆ ಎಲ್ಲರಿಗೂ ಕೈಮುಗಿಯಬೇಕಾಗುತ್ತದೆ.' ಎಂಬ ಡಾ.ಎ.ಪಿ.ಜೆ.. ಅಬ್ದುಲ್ ಕಲಾಂರವರ ಮಾತುಗಳು ಮನನ ಯೋಗ್ಯ. ಕೇವಲ ಉತ್ಸಾಹದಿಂದಲೇ ಸಾಧನೆ ಸಾಧ್ಯವಿಲ್ಲ. ಗುರಿಯತ್ತ ಸಾಗಲು ಕೆಲಸದ ಮೇಲೆ ಪ್ರೀತಿಯೊಂದಿಗೆ ಸಮರ್ಪಣಾ ಭಾವವಿದ್ದರೆ ಮಾತ್ರ ಕೊನೆಯಿರದ ಸಾಧನೆಗೆ ಹಾದಿ ತೆರೆಯುವುದು.

ಲೇಖನ

■ **ಜಯಶ್ರೀ.ಜೆ.ಅಬ್ಬಿಗೇರಿ**
ಇಂಗ್ಲೀಷ್ ಉಪನ್ಯಾಸಕರು ಬೆಳಗಾವಿ
ಮೊ ನಂ: 9449234142





## ತರಕಾರಿಗಳ ಸೇವನೆಯಿಂದ ಸದೃಢ ಆರೋಗ್ಯ

ಆಳಂದ:ವ್ಯಕ್ತಿ ದೈಹಿಕ, ಮಾನಸಿಕವಾಗಿ ಜೀವಿಸಿ, ಬೆಳವಣಿಗೆ ಹೊಂದಲು, ಆರೋಗ್ಯಕರವಾಗಿರಬೇಕಾದರೆ, ಆಹಾರವು ಪ್ರಮುಖವಾದ ಪಾತ್ರವನ್ನು ವಹಿಸುತ್ತದೆ. ಶುದ್ಧ, ಸ್ವಚ್ಛವಾಗಿರುವ ಹಾಗೂ ಆದಷ್ಟು ಸಾವಯುವ ಪದ್ಧತಿಯ ಮೂಲಕ ಬೆಳೆದ ತರಕಾರಿಗಳ ಸೇವನೆ ಮಾಡುವುದುರಿಂದ ಸದೃಢ ಆರೋಗ್ಯ ಕಾಪಾಡಿಕೊಳ್ಳಬಹುದಾಗಿದೆ ಎಂದು ಉಪನ್ಯಾಸಕ, ಚಿಂತಕ ಎಚ್.ಬಿ.ಪಾಟೀಲ್ ಹೇಳಿದರು.

ತಾಲೂಕಿನ ಸುಂಟನೂರ ಗ್ರಾಮದ ಸೀಮೆಗೆ ಹೊಂದಿಕೊಂಡಿರುವ ಟೋಲ್‌ಗೇಟ್ ಸಮೀಪದ ರೈತ ಚಂದ್ರಶ್ಯಾ ಇಟಗಿ ಅವರ ತರಕಾರಿ ತೋಟದಲ್ಲಿ ಕಲಬುರಗಿಯ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಬುಧವಾರ ಜರುಗಿದ 'ವಿಶ್ವ ತರಕಾರಿ ದಿನಾಚರಣೆ'ಯಲ್ಲಿ ತರಕಾರಿ ಬೆಳೆಗಾರ ರೈತ ಇಟಗಿಗೆ ಸತ್ಕರಿಸಿ, ನಂತರ ಅವರು ಮಾತನಾಡುತ್ತಿದ್ದರು.

ಬಹುತೇಕ ತರಕಾರಿಗಳು ಕಡಿಮೆ ಕೊಬ್ಬು ಮತ್ತು ಕ್ಯಾಲೋರಿ ಹಾಗೂ ಹೆಚ್ಚಿನ ಪೋಷಕಾಂಶಗಳು ಹೊಂದಿವೆ. ನಿಯಮಿತವಾಗಿ ಹಸಿರು ಸೊಪ್ಪುಗಳು ಸೇರಿದಂತೆ ವಿವಿಧ ರೀತಿಯ ತರಕಾರಿಗಳ ಸೇವನೆಯಿಂದ ಜೀರ್ಣ ಶಕ್ತಿ ವೃದ್ಧಿ, ತೂಕ ನಿರ್ವಹಣೆ, ರೋಗ ನಿರೋಧಕ ಶಕ್ತಿಯ ವೃದ್ಧಿ, ಹೃದಯ, ಕಣ್ಣು, ಸ್ನಾಯುಗಳು, ಮೆದಳು, ಚರ್ಮ ಸೇರಿದಂತೆ ದೇಹದ ವಿವಿಧ ಭಾಗಗಳು ಸದೃಢವಾಗುತ್ತವೆ. ಹೃದಯ ಕಾಯಿಲೆ, ಅಧಿಕ ರಕ್ತದೊತ್ತಡ, ಪಾರ್ಶ್ವವಾಯು, ಟೈಪ್-2ರ ಮಧುಮೇಹ, ಕ್ಯಾನ್ಸರ್ ಸೇರಿದಂತೆ ಮತ್ತಿತರ ಕಾಯಿಲೆಗಳಿಂದ ದೂರವಿರಬಹುದಾಗಿದೆ ಎಂದು ವೈದ್ಯಲೋಕ ತಿಳಿಸುತ್ತದೆ. ಆದ್ದ-ರಿಂದ ನಿಯಮಿತವಾಗಿ ತರಕಾರಿಗಳನ್ನು ಸೇವಿಸಿ ಆರೋಗ್ಯವನ್ನು ಕಾಪಾಡಿಕೊಳ್ಳೋಣ ಮತ್ತು ತರಕಾರಿ ಬೆಳೆಗಾರರಿಗೆ ಪ್ರೋತ್ಸಾಹಿಸೋಣ ಎಂದರು.

ಸತ್ಕಾರ ಸ್ವೀಕರಿಸಿ ಮಾತನಾಡಿದ ತರಕಾರಿ ಬೆಳೆಗಾರ ರೈತ ಚಂದ್ರಶ್ಯಾ ಇಟಗಿ, ನಾನು ವಿವಿಧ ತರಕಾರಿ, ಹೂಗಳನ್ನು ಬೆಳೆಯುತ್ತೇನೆ. ಸಾವಯುವ ಗೊಬ್ಬರಕ್ಕೆ ಆದ್ಯತೆ ನೀಡುತ್ತೇನೆ. ನೈಜ ರೈತರನ್ನು ಗುರ್ತಿಸಿ, ಪ್ರೋತ್ಸಾಹಿಸುವ ಕಾರ್ಯವಾಗಬೇಕಾಗಿದೆ. ಈ ನಿಟ್ಟಿನಲ್ಲಿ ಬಸವೇಶ್ವರ ಸಮಾಜ ಸೇವಾ ಬಳಗವು ಉತ್ತಮವಾದ ಕಾರ್ಯವನ್ನು ಮಾಡುತ್ತಿದೆ ಎಂದು ನುಡಿದರು.

ಕಾರ್ಯಕ್ರಮದಲ್ಲಿ ನಿವೃತ್ತ ಕೃಷಿ ಅಧಿಕಾರಿ ಹಾಗೂ ಕೃಷಿಕ ಸಮಾಜ ಸದಸ್ಯ ಶಿವಯೋಗೆಪ್ಪಾ ಎಸ್.ಬಿರಾದಾರ, ಪ್ರಮುಖರಾದ ಭೀಮಾಶಂಕರಚೌಡಾಪುರ, ರಮೇಶ್ ಗರಡಕರ್, ಸಂತೋಷ ಶಿಲ್ಡ್, ಅಭಿಶೇಕ ಗೌಳಿ, ಶಿವಲಿಂಗಪ್ಪ ನಿಗಸಿ ಸೇರಿದಂತೆ ಇನ್ನಿತರರಿದ್ದರು.

## ಮನಸೆಳೆದ ಅಂಬಾಕೃಪಾ ನೃತ್ಯ ನಿಕೇತನ ವಿದ್ಯಾರ್ಥಿನಿಯರ ಭರತನಾಟ್ಯ

ಕಲಬುರಗಿ: ನಗರದ ವಿಶ್ವರಾಧ್ಯ ಕಾಲೋನಿಯ ವಿಶ್ವಾಂಜನೆಯ ದೇವಸ್ಥಾನ ನಿರುಪಮ ಗುರುರಾಜ ಮತ್ತು ಡಾ.ಅಂಬುಜಾ ಮಳಖೇಡ್ಕರ್ ಅವರ ಸಂಪಾದಕತ್ವದಲ್ಲಿ ಮೂಡಿ ಬಂದ ಪುಷ್ಪ ಮಂಜರಿ ಕವನ ಸಂಕಲನ ಬಿಡುಗಡೆ ಕಾರ್ಯಕ್ರಮದಲ್ಲಿ ಅಂಬಾ ಕೃಪಾ ನೃತ್ಯ ನಿಕೇತನ ಸಂಸ್ಥೆಯ ವಿದ್ಯಾರ್ಥಿನಿಯರಿಂದ ಭರತ ನಾಟ್ಯ ಕಾರ್ಯಕ್ರಮ ಎಲ್ಲರ ಮನಸೂರೆಗೊಂಡಿತು.

ಅಧಿಕಮಾಸದ ನಿಮಿತ್ಯ ವೈಷ್ಣವಿ ಪಾಟೀಲ ಅವರ ನೇತೃತ್ವದ ಅಂಬಾ ಕೃಪಾ ನಿತ್ಯ ನಿಕೇತನ ಭರತನಾಟ್ಯ ಶಾಲೆಯ ವಿದ್ಯಾರ್ಥಿನಿಯರು ತಮ್ಮ ನೃತ್ಯಗಳಿಂದ ಎಲ್ಲರನ್ನು ಭಕ್ತಿಯಲ್ಲಿ ಮುಳುಗಿಸಿದರು. ರಾಮ ನಾಮವ ನೆನೆದರೆ ಭಯವಿಲ್ಲ ಮನಕೆ ಎನ್ನುವ ನೃತ್ಯ ಎಲ್ಲರ ಮನಕೆ ಆನಂದ ನೀಡಿತು.

ಸುವನ ಪ್ರಕಾಶನದಿಂದ ಪ್ರಕಟಗೊಂಡ ಪುಷ್ಪ ಮಂಜರಿ ಕವನ ಸಂಕಲನವನ್ನು ನಿವೃತ್ತ ಕನ್ನಡ ಪ್ರಾಧ್ಯಾಪಕರಾದ ಡಾ. ಶೈಲಜಾ ಕೊಪ್ಪರ ಅವರು ಬಿಡುಗಡೆ ಮಾಡಿದರು.ಕವನ ಸಂಕಲನ ಕು-ರಿತು ಮಾತನಾಡಿದ ಅವರು ಸಂಕಲನದಲ್ಲಿ ಬರೆದ ಎಲ್ಲ ಕವಿತ್ರಿಯರು ಒಳ್ಳೆಯ ಅನುಭವಿಗಳಾಗಿದ್ದಾರೆ. ಇಲ್ಲಿ ಮೂಡಿ ಬಂದಿರುವ ಕವನಗಳು ನೋಡಿದಾಗ ಅವರು ಸಮಾಜದಲ್ಲಿ ನಡೆಯುವ ಎಲ್ಲ ವಿದ್ಯಮಾನಗಳ ಜೀವನಾನುಭವಗಳದಿಂದ ಬರೆದಿದ್ದಾರೆ ಎಂಬುದು ಈ ಕವನಗಳನ್ನು ಓದಿದಾಗ ಸ್ಪಷ್ಟವಾಗಿ ಗೋಚರಿಸುತ್ತವೆ. ಕಾವ್ಯ ನಮ್ಮೊಳಗಿನ ಧ್ವನಿಯನ್ನು ಬಡಿದೆಬ್ಬಿಸುತ್ತದೆ. ಮೊಬೆಲ್ ಸಂಸ್ಕೃತಿ ಕುರಿತಂತೆ ಹೆಣ್ಣು ಮಕ್ಕಳ ಜೀವನದಲ್ಲಿ ನಿತ್ಯವೂ ಕಷ್ಟಪಡುವ ಯಾತನೆಗಳ ಕುರಿತ ಸಾಮಾಜಿಕತೆ ಮತ್ತು ಭಕ್ತಿ ಪ್ರಧಾನ ಕವಿತೆಗಳಿವೆ ಎಂದು ತಿಳಿಸಿದರು.

ವಿಠ್ಠಲರಾವ ಕುಲಕರ್ಣಿ ಅವರು ಅಧ್ಯಕ್ಷತೆ

## ಯೋಗವು ದೈಹಿಕ ಹಾಗೂ ಮಾನಸಿಕ ಆರೋಗ್ಯ ವೃದ್ಧಿಗೆ ಅತ್ಯಂತ ಪರಿಣಾಮಕಾರಿ:ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ

ಕಲಬುರಗಿ: ಯೋಗವು ದೈಹಿಕ ಹಾಗೂ ಮಾನಸಿಕ ಆರೋಗ್ಯ ವೃದ್ಧಿಗೆ ಅತ್ಯಂತ ಪರಿಣಾಮಕಾರಿ ಸಾಧನವಾಗಿದ್ದು, ಆರೋಗ್ಯಕರ ಸಮಾಜ ನಿರ್ಮಾಣದಲ್ಲಿ ಮಹತ್ವದ ಪಾತ್ರ ವಹಿಸುತ್ತದೆ ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಹೇಳಿದರು.

ಇತ್ತೀಚಿಗೆ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಜಿಲ್ಲಾಧಿಕಾರಿಗಳು, ಜೂನ್ 21 ರಂದು ಬೆಳಿಗ್ಗೆ 7 ಗಂಟೆಯಿಂದ 7:45 ರವರೆಗೆ ನಗರದ ಡಾ. ಚಂದ್ರಶೇಖರ್ ಪಾಟೀಲ್ ಕ್ರೀಡಾಂಗಣದಲ್ಲಿ ಬೃಹತ್ ಯೋಗ ಪ್ರದರ್ಶನ ಕಾರ್ಯಕ್ರಮಕ್ಕೆ ಬರುವ ಶಾಲಾ-ಕಾಲೇಜು ವಿದ್ಯಾರ್ಥಿಗಳು ಸಾರ್ವಜನಿಕರು ಹಾಗೂ ವಿವಿಧ ಇಲಾಖೆಗಳ ಸಿಬ್ಬಂದಿಗಳು ಬೆಳಿಗ್ಗೆ 6:30ರ ಒಳಗಾಗಿ ಕ್ರೀಡಾಂಗಣ ತಲುಪಿ ನಿಯೋಜಿತ ಜಾಗಗಳಲ್ಲಿ ಸಿದ್ಧರಿರಬೇಕು ತಿಳಿಸಿದರು,

ಕ್ರೀಡಾಂಗಣದಲ್ಲಿ ಯೋಗಾಸನಕ್ಕೆ ಮ್ಯಾಗಳ ಅಳವಡಿಕೆ, ಶುದ್ಧ ಕುಡಿಯುವ ನೀರಿನ ಸೌಲಭ್ಯ, ತುರ್ತು ಚಿಕಿತ್ಸೆಗಾಗಿ ಆಂಬುಲೆನ್ಸ್ ವ್ಯವಸ್ಥೆ ಹಾಗೂ ಸೂಕ್ತ ಪೊಲೀಸ್ ಭದ್ರತೆಯನ್ನು ಕಲ್ಪಿಸಬೇಕು. ಕ್ರೀಡಾಂಗಣದಲ್ಲಿ ಬೆಳೆದಿರುವ ಹುಲ್ಲನ್ನು ಸಣ್ಣದಾಗಿ ಕತ್ತರಿಸಿ ಇಡೀ ಆವರಣವನ್ನು ಸ್ವಚ್ಛವಾಗಿಟ್ಟುಕೊಳ್ಳುವಂತೆ ಮಹಾನಗರ ಪಾಲಿಕೆ ಮತ್ತು ಕ್ರೀಡಾ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ತೋಟಗಾರಿಕೆ ಇಲಾಖೆಯಿಂದ ಕ್ರೀಡಾಂಗಣದ ಸೌಂದರ್ಯೀಕರಣಕ್ಕಾಗಿ 50 ಅಲಂಕಾರಿಕ ಗಿಡಗಳ



ಕುಂಡಗಳನ್ನು ಒದಗಿಸುವಂತೆ ತಿಳಿಸಿದರು.

ಗಿನ್ನೆಸ್ ವಿಶ್ವ ದಾಖಲೆಯ ಪ್ರಯತ್ನ: ಜೂನ್ 14 ರಂದು ಆನ್‌ಲೈನ್ ಮೂಲಕ ಯೋಗದ ಗಿನ್ನೆಸ್ ವಿಶ್ವ ದಾಖಲೆಯ ಮಹತ್ತರ ಪ್ರಯತ್ನವೊಂದು ನಡೆಯುತ್ತಿದ್ದು, ಜಿಲ್ಲೆಯಿಂದ ಗರಿಷ್ಠ ಸಂಖ್ಯೆಯ ನೋಂದಣಿ ದಾಖಲಾಗಬೇಕಿದೆ. ಇದಕ್ಕಾಗಿ ವೆಬ್ ಪೋರ್ಟಲ್ ಲಿಂಕ್ ಅನ್ನು ಎಲ್ಲಾ ಇಲಾಖೆಗಳ ಗ್ರೂಗಳಲ್ಲಿ ಹಂಚಿಕೊಳ್ಳಬೇಕು. ವಿಶೇಷವಾಗಿ ಶಿಕ್ಷಣ ಇಲಾಖೆ (ಶಾಲೆಗಳು), ಸಮಾಜ ಕಲ್ಯಾಣ ಇಲಾಖೆ (ವಸತಿ ನಿಲಯಗಳು) ಮತ್ತು ಪೊಲೀಸ್ ಇಲಾಖೆಯ ಸಿಬ್ಬಂದಿ ಕಡ್ಡಾಯವಾಗಿ ನೋಂದಣಿ ಮಾಡಿಕೊಳ್ಳಬೇಕು ಹಾಗೂ ಯೋಗ ಮಾಡುವಾಗ ತೆಗೆದ ಫೋಟೋಗಳನ್ನು ಪೋರ್ಟನಲ್ಲಿ ಅಪ್‌ಲೋಡ್ ಮಾಡಬೇಕು ಎಂದು ಕಟ್ಟುನಿಟ್ಟಾಗಿ ಆದೇಶಿಸಿದರು. ಜೂನ್ 19 ರಂದು ಬೃಹತ್ 'ಯೋಗ ನಡಿಗೆ': ಮುಖ್ಯ ಕಾರ್ಯಕ್ರಮದ ಮುನ್ನೋಡಿಯಾಗಿ ಜೂನ್ 19 ರಂದು ಬೆಳಿಗ್ಗೆ 9:30 ಕ್ಕೆ ನಗರದಲ್ಲಿ 'ಯೋಗ ನಡಿಗೆ' (ರನ್ ಫಾರ್ ಯೋಗ) ಆಯೋಜಿಸಲಾಗಿದೆ. ಈ ನಡಿಗೆಯು ಜಗತ್ ವೃತ್ತದಿಂದ ಆರಂಭವಾಗಿ ಸರ್ದಾರ್ ವಲ್ಲಭಭಾಯಿ ಪಟೇಲ್ ವೃತ್ತದ ಮಾರ್ಗವಾಗಿ ಜಿಲ್ಲಾಧಿಕಾರಿಗಳ ಕಚೇರಿಯವರೆಗೆ ಸಾಗಲಿದೆ. ಜಿಲ್ಲೆಯ ಜನಸಾಮಾನ್ಯರು, ಯೋಗಾಸಕ್ತರು ಮತ್ತು ಸಂಘ-ಸಂಸ್ಥೆಗಳು ಈ ಎಲ್ಲಾ ಕಾರ್ಯಕ್ರಮಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕಾಗಿ ಕೋರಲಾಗಿದೆ.

ಇದೇ ಸಂದರ್ಭದಲ್ಲಿ ಪ್ರೊಬೇಷನರಿ ಐ.ಎ.ಎಸ್. ಶಿಖರ್ ಮೋಘ, ಡಿಯುಡಿಸಿ ಜಿಲ್ಲಾ ಯೋಜನಾ ನಿರ್ದೇಶಕ ಮುನ್ನವರ ದೌಲಾ, ಮಹಿಳಾ ಮತ್ತು ಮಕ್ಕಳ ಇಲಾಖೆಯ ಉಪನಿರ್ದೇಶ ರಾಜಕುಮಾರ ರಾಠೋಡ, ಯುವ ಜನಸೇವಾ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಸಂಗಮೇಶ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕಿ ಶಂಕ್ರಮ್ಮ ಡವಳಗಿ, ಜಿಲ್ಲಾ ಆಯುಷ್ ಇಲಾಖೆಯ ಅಧಿಕಾರಿ ಡಾ. ಕೆ.ಬಿ. ಬಬಲಾದಿ, ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರು ಸೇರಿದಂತೆ ಮಹಾನಗರ ಪಾಲಿಕೆಯ ಅಧಿಕಾರಿಗಳು ಪೊಲೀಸ್ ಇಲಾಖೆಯ ಅಧಿಕಾರಿಗಳು ಬಸವೇಶ್ವರ ಆಯುವೇಧಿಕ ಮೇಡಿಕಲ್ ಕಾಲೇಜ್ ಮತ್ತು ಆಸ್ಪತ್ರೆ ಹಾಗೂ ಸಂಶೋಧನಾ ಕೇಂದ್ರ ಪ್ರಾಂಶುಪಾಲರು ವಿವಿಧ ಇಲಾಖೆ ಯ ಪ್ರಾಂಶುಪಾಲರು, ಪತಂಜಲಿ ಯೋಜನಾ ಸಮಿತಿ ಅಧ್ಯಕ್ಷರು ಹಾಗೂ ಇತರರು ಭಾಗವಹಿಸಿದ್ದರು.

## ಕನ್ನಡ ನಾಡಿಗೆ ಲಲಿತ ಕಲೆಗಳ ಕೊಡುಗೆ ಅನನ್ಯ: ಬಸವರಾಜ ದೇಶಮುಖ

ಕಲಬುರಗಿ: ಕನ್ನಡ ನಾಡಿನ ಸಂಸ್ಕೃತಿ ಮತ್ತು ಕಲೆಯನ್ನು ಪೊತ್ಸಾಹಿಸಲು ಕರ್ನಾಟಕ ಸರ್ಕಾರವು ಅನೇಕ ರೀತಿಯ ಸಹಕಾರವನ್ನು ಸಾಂಸ್ಕೃತಿಕ ಸಂಘ ಸಂಸ್ಥೆಗಳಿಗೆ ನೀಡಿ ಪೊತ್ಸಾಹಿಸುತ್ತಿದೆ . ಶಿವಶರಣ-ರು ಬರೆದಂತಹ ಅನೇಕ ವಚನ ತತ್ವಪದಗಳಿಂದ ನಮ್ಮ ಸಮಾಜದಲ್ಲಿ ಮನಸ್ಸಿಗೆ ಶಾಂತಿ ಸಮಾಧಾನ ತಂದಿದೆ ಎಂದು ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಬಸವರಾಜ ದೇಶಮುಖ ಅಭಿಪ್ರಾಯಪಟ್ಟರು.

ಅವರು ಕಲಬುರಗಿಯಲ್ಲಿ ಗಡಿನಾಡ ಸಂಗೀತ ಸೇವಾ ಸಂಸ್ಥೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ ಲಲಿತ ಕಲೆಗಳ ಸಂಗಮ ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.ಕರ್ನಾಟಕ ರಾಜ್ಯ ಸಹಕಾರಿ ಸಕ್ಕರೆ ಕಾರ್ಖಾನೆ ಮಹಾಮಂಡಳಿ ನಿರ್ದೇಶಕ ಧರ್ಮರಾಜ ಸಾಹು ಭೂಸನೂರ ಮಾತನಾಡಿ,ಲಲಿತ ಕಲೆಗಳಲ್ಲಿ ಬರುವಂತಹ ಶಿಲ್ಪ,,ಚಿತ್ರಕಲೆ,ಸಾಹಿತ್ಯ , ಸಂಗೀತ ಕಲೆಗಳು ನಮ್ಮ ಭಾರತೀಯ ಪರಂಪರೆಯನ್ನು ಎತ್ತಿ ಹಿಡಿದಿವೆ. ಮಾನವನ ಜೀವನದಲ್ಲಿ ಹಾಗೂ ಸಕಲ ಜೀವಿಗಳಲ್ಲಿ ಕಲೆಗಳು ಪ್ರಮುಖ ಪಾತ್ರ ವಹಿಸುತ್ತವೆ ಎಂದರು.

ಮಂಗಲಗಿಯ ಶ್ರೀ ಶಾಂತೇಶ್ವರ ಹಿರೇಮಠದ ಡಾ. ಶಾಂತ ಸೋಮನಾಥ ಶಿವಾಚಾರ್ಯ ಸಾನಿಧ್ಯ ವಹಿಸಿದ್ದರು. ಡಾ. ನೀಲಾಂಬಿಕಾ ಪೊಲೀಸ್ ಪಾಟೀಲ,



ಬಸವರಾಜ ಮುನ್ನೊಳ್ಳಿ, ಶಂಭುಲಿಂಗಯ್ಯ ಮಠಪತಿ ತಾವರಗೇರಾ, ಶಿವಯ್ಯ ಸ್ವಾಮಿ ಆಲೂರ ಬಿ. ಮುಖ್ಯ ಅತಿಥಿಗಳಾಗಿದ್ದರು.

ನಂತರ ಹೆಸರಾಂತ ಆಕಾಶವಾಣಿ ದೂರದರ್ಶನ ಕಲಾವಿದರಾದಬಸವರಾಜಭಂಟನೂರ,ಮಲ್ಲಿಕಾರ್ಜುನ ಶಾಸ್ತ್ರೀ ಐನಾಪೂರ, ಜಗದೀಶ ನಗನೂರ, ಕವಿತಾ ಮಠಪತಿ ಮೊದಲಾದವರು ಸಂಗೀತ ಕಾರ್ಯಕ್ರಮ ನಡೆಸಿಕೊಟ್ಟರು.

ಇನ್ನೋರ್ವ ಆಕಾಶವಾಣಿ ಮತ್ತು ದೂರದರ್ಶನ ಕಲಾವಿದ ಹಾಗೂ ನಿವೃತ್ತ ವಾರ್ತಾಧಿಕಾರಿ ಜಿ.ಚಂದ್ರಕಾಂತ ಸೋಹನಿ ರಾಗದಲ್ಲಿ ಪ್ರಸ್ತುತ ಪಡಿಸಿದ ತ್ರಿಭಾಷಾ ವಚನ ಗಾಯನ ವಿಶೇಷವಾಗಿತ್ತು. ಗುರುಶಾಂತಯ್ಯ ಸ್ಥಾವರಮಠ ಸ್ವಾಗತಿಸಿದರು. ವಿಶ್ವನಾಥ ರಾಜನಾಳ ನಿರೂಪಿಸಿದರು. ಸಂಸ್ಥೆಯ ಅಧ್ಯಕ್ಷ ವೀರಭದ್ರಯ್ಯ ಸ್ಥಾವರಮಠ ವಂದಿಸಿದರು.

# ಕ್ರಾಂತಿಕಾರಿ ಕವಿ ಸರ್ವಜ್ಞ

## ಸಾವಿಲ್ಲದ ಶರಣರು

■ ಉದಯರಶ್ಮಿ ದಿನಪತ್ರಿಕೆ

ಸರ್ವಜ್ಞ ಕವಿ 16ನೇ ಶತಮಾನದಲ್ಲಿ ಜೀವಿಸಿದ್ದ ಕನ್ನಡದ ಅತ್ಯಂತ ಜನಪ್ರಿಯ ಕ್ರಾಂತಿಕಾರಿ ತ್ರಿಪದಿ ಕವಿ, ತತ್ವಜ್ಞಾನಿ ಮತ್ತು ಸಮಾಜ ಸುಧಾರಕರು. ಕನ್ನಡ ಸಾಹಿತ್ಯ ಮತ್ತು ಸಂಸ್ಕೃತಿಯಲ್ಲಿ ತನ್ನದೇ ಆದ ವಿಶಿಷ್ಟ ಸ್ಥಾನ ಪಡೆದ ಸರ್ವಜ್ಞ ಅಪ್ಪಟ ಬಸವ ಭಕ್ತ ಕ್ರಾಂತಿಕಾರಿ ಕವಿ. ತನ್ನ ಮೊನಚಾದ ಟೀಕೆ ಟಿಪ್ಪಣಿಗಳು ವಿಡಂಬನೆಯಿಂದ ಸುತ್ತಲಿನ ಅಂಕು ಡೊಂಕುಗಳನ್ನು ತಿದ್ದಿದ್ದಾನೆ. ಸಮಾಜದ ಆಷಾಢಭೂತಿತನಕ್ಕೆ ನೇರ ಚಾಟಿ ಏಟು ಬೀಸಿದ್ದಾನೆ.

ಮೂರು ಸಾಲುಗಳ ಸರಳ 'ತ್ರಿಪದಿ' ವಚನಗಳ ಮೂಲಕ ಸಮಾಜದ ಅಂಕುಡೊಂಕುಗಳನ್ನು ತಿದ್ದಿ, ಸಾರ್ವಕಾಲಿಕ ನೀತಿ ಮತ್ತು ಮೌಲ್ಯಗಳನ್ನು ಬೋಧಿಸಿದ ದಾರ್ಶನಿಕರಾಗಿದ್ದಾರೆ.

ಜನನ ಮತ್ತು ಬಾಲ್ಯ

ಹುಟ್ಟೂರು: ಇಂದಿನ ಹಾವೇರಿ ಜಿಲ್ಲೆಯ ಹಿರೇಕೆರೂರು ತಾಲ್ಲೂಕಿನ ಅಬಲೂರು.

ನಿಜನಾಮ: ಸಂಶೋಧನೆಗಳ ಪ್ರಕಾರ ಈತನ ನಿಜವಾದ ಹೆಸರು ಪುಷ್ಪದತ್ತ, 'ಸರ್ವಜ್ಞ' ಎಂಬುದು ಕಾವ್ಯನಾಮ.

ತಂದೆ ತಾಯಿ

: ತಂದೆ ಕುಂಬಾರ ಮಲ್ಲ ಮತ್ತು ತಾಯಿ ಮಾಳೆ (ಮಾಳಲಾದೇವಿ).

ತಂದೆ ಕುಂಬಾರ ಮಲ್ಲ ತಾಯಿ ಮಾಳಲಾದೇವಿ ಇಂದು ಧರೆಗೆ
ಬಂದ ಚಂದ್ರಶೇಖರ ನಾನು ಸರ್ವಜ್ಞ

ಎಂದು ತನ್ನ ಹುಟ್ಟಿನ ಬಗ್ಗೆಯೇ ಹೇಳಿಕೊಂಡಿದ್ದಾನೆ.




ಸಾಹಿತ್ಯ ಮತ್ತು ತ್ರಿಪದಿಗಳ ವೈಶಿಷ್ಟ್ಯ

ತ್ರಿಪದಿ ಛಂದಸ್ಸು: ಮೂರು ಸಾಲುಗಳ ಪದ್ಯ ಪ್ರಕಾರವಾದ ತ್ರಿಪದಿಗೆ ಸರ್ವಜ್ಞ ಅತ್ಯಂತ ಪ್ರಸಿದ್ಧರಾಗಿದ್ದಾರೆ.

ಜಾತಿ ಪದ್ಧತಿಯ ವಿರೋಧ, ಮೂಢನಂಬಿಕೆಗಳ ಖಂಡನೆ, ನೀತಿ, ಕಾಯಕದ ಮಹತ್ವ, ಸ್ನೇಹ ಮತ್ತು ಲೌಕಿಕ ಜ್ಞಾನ ಇವರ ವಚನಗಳ ಮುಖ್ಯ ವಸ್ತುಗಳಾಗಿದ್ದವು.

ಸರಳ ಭಾಷೆ: ಸಾಮಾನ್ಯ ಜನರಿಗೂ ಅರ್ಥವಾಗುವಂತೆ ಉಪಮೆ ಹಾಗೂ ಉದಾಹರಣೆಗಳನ್ನು ಬಳಸಿ ಕಾವ್ಯ ರಚಿಸಿದ್ದಾರೆ.

ಪ್ರಸಿದ್ಧ ವಚನ (ತ್ರಿಪದಿ)

ತಮ್ಮ ಜ್ಞಾನದ ಕುರಿತು ಸರ್ವಜ್ಞ ಅತ್ಯಂತ ವಿನಮ್ರವಾಗಿ ಹೀಗೆ ಹೇಳಿಕೊಂಡಿದ್ದಾರೆ:

"ಸರ್ವಜ್ಞನೆಂಬುವನು ಗರ್ವದಿಂದಾದವನೇ?
ಸರ್ವರೊಳು ಒಂದೊಂದು ನುಡಿಗಲಿತು ವಿದ್ಯೆಯ
ಪರ್ವತವೆ ಆದ ಸರ್ವಜ್ಞ"

(ನಾನು ಹುಟ್ಟುತ್ತಲೇ ಎಲ್ಲವನ್ನೂ ತಿಳಿದ ಮಹಾಜ್ಞಾನಿಯಾಗಿರಲಿಲ್ಲ ಅಥವಾ ಅಹಂಕಾರದಿಂದ ಸರ್ವಜ್ಞನಾಗಲಿಲ್ಲ. ಸಮಾಜದಲ್ಲಿ ಸಿಗುವ ಪ್ರತಿಯೊಬ್ಬರಿಂದಲೂ ಒಂದೊಂದು ಒಳ್ಳೆಯ ವಿಷಯಗಳನ್ನು ಕಲಿತು ಜ್ಞಾನದ ಪರ್ವತವಾಗಿದ್ದೇನೆ) ಎಂದು ಹೇಳಿಕೊಂಡಿದ್ದಾನೆ.

ಸರ್ವಜ್ಞನು ಕಂಡ ಬಸವಣ್ಣ

ಸರ್ವಜ್ಞ ತನ್ನ ತ್ರಿಪದಿಗಳಲ್ಲಿ ಬಸವಣ್ಣ ಮತ್ತು ಶರಣರ ಕಾರ್ಯವನ್ನು ನೆನೆಸಿದ್ದಾನೆ.

ಕನ್ನಡದ ಪ್ರಸಿದ್ಧ ತ್ರಿಪದಿ ಕವಿ ಸರ್ವಜ್ಞರು 12ನೇ ಶತಮಾನದ ಸಾಮಾಜಿಕ ಕ್ರಾಂತಿಯ ಹರಿಕಾರರಾದ ವಿಶ್ವಗುರು ಬಸವಣ್ಣನವರ ಮಹಿಮೆ, ಭಕ್ತಿ ಮತ್ತು ಆದರ್ಶಗಳನ್ನು ತಮ್ಮ ಕೆಲವು ಪ್ರಮುಖ ತ್ರಿಪದಿಗಳಲ್ಲಿ ಅತ್ಯಂತ ಗೌರವದಿಂದ ಕೊಂಡಾಡಿದ್ದಾರೆ. ಲಿಂಗಾಯತ ಧರ್ಮ ಮತ್ತು ಸಮಾಜಕ್ಕೆ ಬಸವಣ್ಣನವರ ಕೊಡುಗೆಯನ್ನು ಸರ್ವಜ್ಞರು ಮುಕ್ತಕಂಠದಿಂದ ಶ್ಲಾಘಿಸಿದ್ದಾರೆ. ಸರ್ವಜ್ಞ ಒಬ್ಬ ನೇರ ದಿಟ್ಟ ನಿರಂತರ ಕ್ರಾಂತಿಕಾರಿ ಕವಿ. ಒಂದು ಅರ್ಥದಲ್ಲಿ ಬಸವಣ್ಣನವರ ಶರಣರ ಕ್ರಾಂತಿಯ ವಾರಸುದಾರ.

ಬಸವಣ್ಣನವರ ಕುರಿತಾದ ಸರ್ವಜ್ಞನ ಪ್ರಮುಖ ತ್ರಿಪದಿಗಳು ಮತ್ತು ಅವುಗಳ ಸರಳ ಭಾವಾರ್ಥಗಳು

1. ಲಿಂಗಾಯತ ಧರ್ಮದ ಕರ್ತೃ ಬಸವಣ್ಣ

ಬಸವ ಗುರುವಿನ ಹೆಸರು ಬಲ್ಲವರಾರಿಲ್ಲ।
ಹುಸಿಮಾತನಾಡಿ ಕೆಡದಿರಿ ಲಿಂಗಾಯತಕೆ।
ಬಸವಣ್ಣನೆ ಕರ್ತೃ ಸರ್ವಜ್ಞ॥

ಬಸವ ಗುರುವಿನ ಮಹಿಮೆ ಮತ್ತು ಹೆಸರಿನ ಶಕ್ತಿ ಎಲ್ಲರಿಗೂ ತಿಳಿಯದು. ಸುಳ್ಳು ಮಾತುಗಳನ್ನಾಡಿ ನಿಮ್ಮ ಜೀವನವನ್ನು ಹಾಳು ಮಾಡಿಕೊಳ್ಳಬೇಡಿ. ಈ ಲಿಂಗಾಯತ ಧರ್ಮಕ್ಕೆ ಮತ್ತು ವೈಚಾರಿಕ ಸಮಾಜಕ್ಕೆ ಬಸವಣ್ಣನವರೇ ನಿಜವಾದ ಮೂಲಪುರುಷ ಅಥವಾ ಕರ್ತೃವಾಗಿದ್ದಾರೆ.



2. ಬಸವ ನಾಮಸ್ಮರಣೆಯ ಮಹಿಮೆ

ಬಸವನೆಂದಡೆ ಪಾಪ ದೆಶೆಗೆಟ್ಟು ಹೋಗುವುದು।
ಬಸವನ ಪಾದವ ನಂಬಿದ ಭಕ್ತರು।
ಹಸನಾದರಯ್ಯ ಸರ್ವಜ್ಞ॥

ಬಸವ' ಎಂಬ ಹೆಸರನ್ನು ಭಕ್ತಿಯಿಂದ ಉಚ್ಚರಿಸಿದರೆ ಸಾಕು, ಮನುಷ್ಯನ ಪಾಪಗಳೆಲ್ಲವೂ ದಿಕ್ಕೆಟ್ಟು ಓಡಿಹೋಗುತ್ತವೆ. ಬಸವಣ್ಣನವರ ತತ್ವಗಳನ್ನು ಮತ್ತು ಅವರ ಪಾದಗಳನ್ನು ನಂಬಿ ನಡೆದ ಭಕ್ತರ ಜೀವನವು ಅತ್ಯಂತ ಸುಂದರವಾಗಿ ಹಾಗೂ ಪಾವನವಾಗಿ ರೂಪಿತಗೊಂಡಿದೆ.

3. ಬಸವಣ್ಣನೇ ಜಗದ ಗುರು

ಬಸವನೆ ಜಗದಾದಿ ಬಸವನೆ ಜಗದೀಶ।
ಬಸವನೇ ಜಗದ ಗುರುಪ್ರಣವವೆಂದರಿದು।
ಬಸವನನು ಜಪಿಸು ಸರ್ವಜ್ಞ॥

ಬಸವಣ್ಣನೇ ಈ ಜಗತ್ತಿನ ಕಲ್ಯಾಣದ ಆದಿಯಾಗಿದ್ದಾನೆ, ಅವನೇ ದೈವಸ್ವರೂಪಿಯಾಗಿದ್ದಾನೆ. ಬಸವಣ್ಣನೇ ಇಡೀ ಜಗತ್ತಿಗೆ ಓಂಕಾರದಂತಹ (ಪ್ರಣವ) ಜ್ಞಾನವನ್ನು ನೀಡಿದ ಜಗದ್ಗುರು ಎಂಬುದನ್ನು ಅರಿತು, ಸದಾ ಆತನ ನಾಮವನ್ನು ಜಪಿಸು.



ಸರ್ವಜ್ಞರು ತಮ್ಮ ಈ ತ್ರಿಪದಿಗಳ ಮೂಲಕ ಬಸವಣ್ಣನವರನ್ನು ಕೇವಲ ಒಬ್ಬ ವ್ಯಕ್ತಿಯಾಗಿ ನೋಡದೆ, ಸಮಾಜವನ್ನು ಉದ್ಧಾರ ಮಾಡಲು ಬಂದ ಸಾಕ್ಷಾತ್ ಶಿವ ಕಲ್ಯಾಣದ ಜ್ಯೋತಿಯಾಗಿ ಆರಾಧಿಸಿದ್ದಾರೆ. ಸರ್ವಜ್ಞ ಒಬ್ಬ ದಿಟ್ಟ ಪ್ರಬುದ್ಧ ಪ್ರಾಮಾಣಿಕ ವೈಚಾರಿಕ ವ್ಯಕ್ತಿ. ತನ್ನ ಅನಿಸಿಕೆ ಭಾವನೆಗಳನ್ನು ನೇರವಾಗಿ ಹೇಳುವ ಗಟ್ಟಿತನ ಹೊಂದಿರುವ ಅಪರೂಪದ ಕವಿ.

ಆಡು ಮುಟ್ಟದ ಸೊಪ್ಪಿಲ್ಲ ಕವಿ ಸರ್ವಜ್ಞ ಬರೆಯದ ವಿಷಯವಿಲ್ಲ ಎನ್ನುವ ಜಾನಪದ ನಾಣ್ಣುಡಿಯಂತೆ ಸರ್ವಜ್ಞ ಎಲ್ಲಾ ವಿಷಯಗಳ ಬಗ್ಗೆ ಸ್ಪಷ್ಟ ಮಾಹಿತಿಯನ್ನು ನೀಡಿದ್ದಾರೆ. ಆರೋಗ್ಯ ಕುಟುಂಬ ಗಂಡ ಹೆಂಡತಿ ಸಂಬಂಧ ಆಹಾರ ವೈದಿಕ ವ್ಯವಸ್ಥೆಯ ವಿರುದ್ಧ ಟೀಕೆ ಹೀಗೆ ಎಲ್ಲಾ ವಿಷಯಗಳನ್ನು ತನ್ನ ತ್ರಿಪದಿಗಳಲ್ಲಿ ದಾಖಲಿಸಿದ್ದಾನೆ.

ಜಯಂತಿ

ಪ್ರತಿ ವರ್ಷ ಫೆಬ್ರವರಿ 20 ರಂದು ಸರ್ವಜ್ಞ ಜಯಂತಿಯನ್ನು ಸರ್ಕಾರಿ ಆಚರಣೆಯಾಗಿ ಆಚರಿಸಲಾಗುತ್ತದೆ.

ಯಾವುದಾದರೂ ಒಂದು ವಿಶ್ವ ವಿದ್ಯಾಲಯದ ಆವರಣದಲ್ಲಿ ಸರ್ವಜ್ಞ ಪೀಠ ಸ್ಥಾಪಿಸಿ ಅವರ ಉಜ್ವಲ ಚಿಂತನೆ ಮಾನವ ಪ್ರೇಮ ಸಾಮಾಜಿಕ ಚಿಂತನೆಗಳ ಬಗ್ಗೆ ಇನ್ನೂ ಹೆಚ್ಚಿನ ಅಧ್ಯಯನ ನಡೆಯಬೇಕು.

ಲೇಖನ
■ ಡಾ. ಶಶಿಕಾಂತ ಪಟ್ಟಣ
ರಾಮದುರ್ಗ – ಪುಣೆ



# ವಿದ್ಯುತ್ ಉಪವಿಭಾಗ ಕಚೇರಿ ಆರಂಭಕ್ಕೆ ಒತ್ತಾಯಿಸಿ ಮನವಿ



■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿಯ ಕಾರ್ಯ ಮತ್ತು ಪಾಲಣಾ ಉಪವಿಭಾಗ ಕಚೇರಿಯನ್ನು ಕೊಲ್ಹಾರ ಪಟ್ಟಣದಲ್ಲಿ ಆರಂಭಿಸಲು ಸರ್ಕಾರದಿಂದ ಮಂಜೂರು ಮಾಡಿಸಬೇಕೆಂದು ಶಾಸಕ ಶಿವಾನಂದ ಪಾಟೀಲ ಅವರಲ್ಲಿ ಅವರ ಅಭಿಮಾನಿ ಬಳಗ ಹಾಗೂ ಕೊಲ್ಹಾರ ತಾಲೂಕಿನ ಗಣ್ಯರು ಮನವಿ ಸಲ್ಲಿಸಿದರು.

ನಿಡಗುಂದಿ ತಾಲೂಕಿನಲ್ಲಿರುವ ಕಾರ್ಯ ಮತ್ತು ಪಾಲಣಾ ಉಪವಿಭಾಗ ಕಚೇರಿಯ ವ್ಯಾಪ್ತಿಯಲ್ಲಿ ಕೊಲ್ಹಾರ ತಾಲೂಕು ಬರುವುದರಿಂದ, ತಾಲೂಕಿನ ರೈತರು ಹಾಗೂ ಸಾರ್ವಜನಿಕರು ವಿದ್ಯುತ್ ಸಮಸ್ಯೆಗಳ ಕುರಿತು ದೂರು ಸಲ್ಲಿಸಲು ಮತ್ತು ಹಣಕಾಸು ವ್ಯವಹಾರಗಳನ್ನು ನಡೆಸಲು ನಿತ್ಯವೂ ತೊಂದರೆ ಅನುಭವಿಸುತ್ತಿದ್ದಾರೆ. ಕೊಲ್ಹಾರದಿಂದ ನಿಡಗುಂದಿ ಸುಮಾರು 45 ಕಿ.ಮೀ ದೂರದಲ್ಲಿದ್ದು, ಸಮರ್ಪಕ ಸಾರಿಗೆ ಸೌಲಭ್ಯವೂ ಇಲ್ಲದಿರುವುದು ಜನರಿಗೆ ಹೆಚ್ಚುವರಿ ಕಷ್ಟ ಉಂಟುಮಾಡುತ್ತಿದೆ. ಈ ಹಿನ್ನೆಲೆಯಲ್ಲಿ ಕೊಲ್ಹಾರ ಪಟ್ಟಣದಲ್ಲಿಯೇ ಉಪವಿಭಾಗ ಕಚೇರಿ ಪ್ರಾರಂಭಿಸುವಂತೆ ವಿನಂತಿಸಿದರು.

ನೀರಾವರಿ ಕ್ಷೇತ್ರದಲ್ಲಿ ಪ್ರಮುಖ ಸ್ಥಾನ ಹೊಂದಿರುವ ಕೊಲ್ಹಾರ ತಾಲೂಕಿನ ರೈತ–ರಿಗೆ ಅನುಕೂಲವಾಗುವಂತೆ ವಿದ್ಯುತ್ ಟ್ರಾನ್ಸ್‌ಫಾರ್ಮರ್‌ಗಳ (ಟಿ.ಸಿ) ದುರಸ್ತಿ ಕೇಂದ್ರವನ್ನೂ ಮಂಜೂರು ಮಾಡಿಸುವ ಮೂಲಕ ಸ್ಥಳೀಯ ನಿರುದ್ಯೋಗ ಯುವಕರಿಗೆ ಉದ್ಯೋಗಾವಕಾಶ ಕಲ್ಪಿಸಬೇಕೆಂದು ಮನವಿಯಲ್ಲಿ ತಿಳಿಸಿದರು.

ಇದೇ ಸಂದರ್ಭದಲ್ಲಿ ಗ್ರಾಮ ಸ್ವರಾಜ್ಯದ ಕನಸನ್ನು ನನಸಾಗಿಸಲು, ಹಲವು ವರ್ಷಗಳಿಂದ ಚುನಾಯಿತ ಪ್ರತಿನಿಧಿಗಳಿಲ್ಲದೇ ಕಾರ್ಯನಿರ್ವಹಿಸುತ್ತಿರುವ ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ್ ಹಾಗೂ ಗ್ರಾಮ ಪಂಚಾಯತ್ ಸಂಸ್ಥೆಗಳಿಗೆ ಶೀಘ್ರದಲ್ಲೇ ಚುನಾವಣೆ ನಡೆಸಲು ಸರ್ಕಾರದ ಮೇಲೆ ಒತ್ತಡ ಹೇರುವಂತೆ ಶಾಸಕರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಕಲ್ಲು ದೇಸಾಯಿ, ತಾನಾಜಿ ನಾಗರಾಳ, ಕೆ.ವಿ. ಕುಲಕರ್ಣಿ, ಪ್ರದೀಪ ಚ. ಪಾಟೀಲ, ಶ್ರೀಕಾಂತ ಗಣಿ, ತಾಲೂಕು ಗ್ಯಾರಂಟಿ ಯೋಜನಾ ಸಮಿತಿ ಅಧ್ಯಕ್ಷ ಸಂತೋಷ ಗಣಾಚಾರಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಜೂ. 27 ರಂದು ಕೆಂಪೇಗೌಡರ ಜಯಂತಿ ಅರ್ಥಪೂರ್ಣವಾಗಿ ಆಚರಿಸಲು ನಿರ್ಧಾರ

ಕಲಬುರಗಿ: ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಶ್ರೀ ಕೆಂಪೇಗೌಡರ ಜಯಂತಿಯನ್ನು ವಿಜೃಂಭಣೆಯಿಂದ ಆಚರಿಸಲು ಜಿಲ್ಲಾಧಿಕಾರಿ ಕಚೇರಿ ಸಹಾಯಕರಾದ ಶಿವಪ್ರಭು ಹಿರೇಮಠ ಅವರ ಸಭೆಯಲ್ಲಿ ನಿರ್ಧರಿಸಲಾಯಿತು.

ಸೋಮವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿ, ಇದೇ ಜೂನ್ 27 ರಂದು ಶನಿವಾರ ಬೆಳಿಗ್ಗೆ 11 ಗಂಟೆಗೆ ಕಲಬುರಗಿ ನಗರದ ಡಾ. ಎಸ್.ಎಂ ಪಂಡಿತ ರಂಗಮಂದಿರದಲ್ಲಿ ಶ್ರೀ ಕೆಂಪೇಗೌಡರ ಜಯಂತಿಯ ಕಾರ್ಯಕ್ರಮ ಜರುಗಲಿದ್ದು, ಈ ಕಾರ್ಯಕ್ರಮದಲ್ಲಿ ಅಧಿಕಾ–ರಿಗಳು ಹಾಗೂ ಸಮಾಜದ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಲು ಸೂಚಿಸಿದರು.



ಅಂದು ಬೆಳಿಗ್ಗೆ 9 ಗಂಟೆಗೆ ಕಡ್ಡಾಯವಾಗಿ ಎಲ್ಲಾ ಜಿಲ್ಲಾ ಹಾಗೂ ತಾಲೂಕು ಮಟ್ಟದ ಸರ್ಕಾರಿ ಕಚೇರಿಗಳಲ್ಲಿ, ಶಾಲಾ–ಕಾಲೇಜುಗಳಲ್ಲಿ ಕಡ್ಡಾಯವಾಗಿ ಜಯಂತಿ ಆಚರಿಸಬೇಕು.

# ವಿಶೇಷ ಚೇತನರು ಸರ್ಕಾರದ ಸೌಲಭ್ಯಗಳ ಪ್ರಯೋಜನ ಪಡೆಯಬೇಕು

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ಸರ್ಕಾರವು ವಿಶೇಷ ಚೇತನರಿಗಾಗಿ ಜಾರಿಗೆ ತಂದಿರುವ ವಿವಿಧ ಯೋಜನೆಗಳು ಮತ್ತು ಸೌಲಭ್ಯಗಳ ಬಗ್ಗೆ ಅರಿವು ಹೊಂದಿದರೆ ಜೀವನ ಮಟ್ಟವನ್ನು ಉತ್ತಮ ಗೊಳಿಸಿಕೊಳ್ಳಬಹುದು ಎಂದು ಸಿಂದಗಿ ಹೆಸ್ಕಾಂ ಇಲಾಖೆಯ ಪ್ರಥಮ ದರ್ಜೆ ಸಹಾಯಕ ಜಿ.ಎಂ.ಬಿರಾದಾರ ಹೇಳಿದರು.

ಸಿಂದಗಿ ಬಸವ ನಗರದಲ್ಲಿರುವ ಸಂಗಮ ಸಮಗ್ರ ಗ್ರಾಮೀಣ ಅಭಿವೃದ್ಧಿ ಕೇಂದ್ರದಲ್ಲಿ ವಿಶೇಷ ಚೇತನರ ಹಕ್ಕುಗಳು ಹಾಗೂ ಸರ್ಕಾರಿ ಸೌಲಭ್ಯಗಳ ಕುರಿತು ಹಮ್ಮಿಕೊಂಡ ತರಬೇತಿ ಕಾರ್ಯಕ್ರಮಕ್ಕೆ ಸಸಿಗೆ ನೀರುಣಿಸುವ ಮೂಲಕ ಚಾಲನೆ ನೀಡಿ ಮಾತನಾಡಿದ ಅವರು, ವಿಶೇಷ ಚೇತನರು ಸಮಾಜದ ಮುಖ್ಯ ವಾಹಿನಿಯಲ್ಲಿ ಆತ್ಮ ವಿಶ್ವಾಸದಿಂದ ಬದುಕಲು ಶಿಕ್ಷಣ, ಸ್ವಾವಲಂಬನೆ ಹಾಗೂ ಜಾಗೃತಿ ಅತ್ಯಂತ ಅಗತ್ಯವೆಂದು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಸಂಗಮ ಸಂಸ್ಥೆಯ ಸಹನಿರ್ದೇಶಕಿ ಸಿಸ್ಟರ ಪ್ರಿಯಾಂಕಾ ಅವರು ಮಾತನಾಡಿದರು.

ಈ ವೇಳೆ ಶಂಕರಗೌಡ ಹನುಮಗೊಂಡ, ಸಂಗಮ ಸಂಸ್ಥೆಯ ನಿರ್ದೇಶಕ ಫಾದರ್ ಸಂತೋಷ್, ಮಹೇಶ ಚವ್ಹಾಣ ಸೇರಿದಂತೆ ಸಿಂದಗಿ, ಬಬಲೇಶ್ವರ, ಮನ್ನಾಪುರ, ಬಂಟನೂರ ಹಾಗೂ ವಂದಾಲ ಗ್ರಾಮದ ವಿಶೇಷ ಚೇತನರ ಸಂಘದ ಸದಸ್ಯರು ಮತ್ತು ಸಂಸ್ಥೆಯ ಸಿಬ್ಬಂದಿಗಳು ಇದ್ದರು.




# ರಾಸಣಗಿ ಗ್ರಾಮದಲ್ಲಿ ಭೂಮಿ ಉಳಿಸಿ ಅಭಿಯಾನ

ಜೇವರ್ಗಿ: ತಾಲೂಕಿನ ರಾಸಣಗಿ ಗ್ರಾಮದಲ್ಲಿ ಕೃಷಿ ವಿಜ್ಞಾನ ಕೇಂದ್ರ, ರದ್ದೇವಾಡ್ಗಿ ಹಾಗೂ ಕೃಷಿ ಇಲಾಖೆ, ಜೇವರ್ಗಿ ಇವರುಗಳ ಸಹಯೋಗದಲ್ಲಿ ಖೇತ್ ಬಚಾವೋ ಅಭಿಯಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತ್ತು.

ಈ ಅಭಿಯಾನದಲ್ಲಿ ಅತಿಯಾದ ರಸಾಯನಿಕ ಗೊಬ್ಬರಗಳ ಬಳಕೆ ಕೃಷಿಗೆ ಮಾರಕ ಎಂದು ಹಿರಿಯ ತಾಂತ್ರಿಕ ಅಧಿಕಾರಿ (ಮಣ್ಣು ವಿಜ್ಞಾನ) ಶ್ರೀಮತಿ ಫರ್ಜಾನಾ ಎಮ. ಕೊರಬು ರವರು ವಿಷಯದ ಬಗ್ಗೆ ಮಾಹಿತಿಯನ್ನು ನೀಡಿದರು. ಮಣ್ಣು ಪರೀಕ್ಷೆಯು ಕೃಷಿಯಲ್ಲಿ ಹೆಚ್ಚು ಇಳುವರಿ ಪಡೆಯಲು ಮತ್ತು ಮಣ್ಣಿನ ಫಲವತ್ತತೆಯನ್ನು ಕಾಪಾಡಿಕೊಳ್ಳಲು ಅತ್ಯಂತ ಪ್ರಮುಖವಾದ ಹಂತವಾಗಿದೆ. ಇದು ಮಣ್ಣಿನಲ್ಲಿರುವ ಪೋಷಕಾಂಶಗಳ ಕೊರತೆಯನ್ನು ಗುರುತಿಸಿ ಅಗತ್ಯವಿರುವ ಗೊಬ್ಬರವನ್ನು ಬಳಸಲು ರೈತರಿಗೆ ಸಹಾಯ ಮಾಡುತ್ತದೆ. ಒಣ ಪ್ರದೇಶವಿದ್ದಲ್ಲಿ ಪ್ರತಿ ಮೂರು ವರ್ಷಕೊಮ್ಮೆ ಮತ್ತು ನೀರಾವರಿ ಪ್ರದೇಶವಿದ್ದಲ್ಲಿ ಪ್ರತಿ ವರ್ಷಕೊಮ್ಮೆ ಮಣ್ಣು ಪರೀಕ್ಷೆ ಮಾಡಿಸಬೇಕು ಎಂದು ತಳಿಸಲಾಯಿತ್ತು.



ರೈತರಿಗೆ ಸಾವಯವ, ಜೈವಿಕ ಹಾಗೂ ಹಸಿರೇಲೆ ಗೊಬ್ಬರಗಳ ಬಳಕೆ ಮತ್ತು ಅದರಿಂದ ಆಗುವ ಅನುಕಲತೆಗಳ ಕುರಿತು ವಿವರಿಸಲಾಯಿತ್ತು. ಈ ಅಭಿಯಾನದಲ್ಲಿ ಸಮಗ್ರ ಪೋಷಕಾಂಶಗಳ ನಿರ್ವಹಣೆ ಹಾಗೂ ನೈಸರ್ಗಿಕ ಸಂಪನ್ಮೂಲಗಳ ಸದ್ಬಳಕೆ ಕು–ರಿತು ತರಬೇತಿ ಹಮ್ಮಿಕೊಳ್ಳಲಾಯಿತ್ತು. ಈಗ ಬಿತ್ತುವ ಸಮಯ ವಿರುವುದರಿಂದ ರೈತರಿಗೆ ಬೀಜೋಪಚಾರ ಮಹತ್ವ ಕುರಿತು ಮಾಹಿತಿಯನ್ನು ನೀಡಲಾಯಿತ್ತು. ಬೀಜಕ್ಕೆ ಶೇ 2ರ ಕ್ಯಾಲ್ಸಿಯಂ ಕ್ಲೋರೈಡ ದಿಂದ ಉಪಚ–ರಿಸಿದಲ್ಲಿ ಬೆಳೆಗೆ ಬರ ನಿರೋಧಕ ಶಕ್ತಿ ಹೆಚ್ಚಿಸುತ್ತದೆ. ಅದೇ ರೀತಿಯಲ್ಲಿ ಟ್ರೈಕೋಡರ್ಮಾವನ್ನು 5ಗ್ರಾಂ ಪ್ರತಿ ಕಿ.ಗ್ರಾಂ ಬೀಜಕ್ಕೆ ಉಪಚರಿಸಿದರೆ ನೆಟೆ ರೋಗ ನಿಯಂತ್ರಣ ಮಾಡಬಹುದೆಂದು ತಿಳಿಸಿದರು. ಸದರಿ ತರಬೇತಿಯಲ್ಲಿ ರೈತರು ಆಧುನಿಕ ಕೃಷಿ ಅಳವಡಿಸಿಕೊಂಡಿದಲ್ಲಿ ಕೃಷಿ ಖರ್ಚು ತಗ್ಗಿಸಿ ಹೆಚ್ಚಿನ ಇಳುವರಿ ಹಾಗೂ ಆರ್ಥಿಕಾಗಿ ಲಾಭ ಪಡೆಯುಬಹುದೆಂದು ತಿಳಿಸಲಾಯಿತ್ತು.

ಇದೇ ಸಂಧರ್ಬದಲ್ಲಿ ತಾಂತ್ರಿಕ ಅಧಿಕಾರಿ (ಕ್ಷೇತ್ರ ನಿರ್ವಹಣೆ) ಶ್ರೀ. ಎಮ್. ಸಿ. ಪಾಟೀಲ್ ರವರು ನೈಸರ್ಗಿಕ ಪೀಟೆನಾಶಕ ಹಾಗೂ ಬೇವಿನ ಎಣ್ಣೆ ಮಹತ್ವ ಕುರಿತು ಮಾತನಾಡುತ್ತಾ ಜೈವಿಕ ಶೀಲಿಂದ್ರನಾಶಕ ಹಾಗೂ ಸ್ಥಳೀಯ ಜೀವಾಮೃತ, ನಿಮಸ್ತ & ಅಗ್ನಿಸ್ತ್ರ ತಯಾರಿಸಿ ಕೃಷಿಯಲ್ಲಿ ಬಳಕೆ ಮಾಡಿ ಬೇಸಾಯ ವೆಚ್ಚ ಕಡಿಮೆಗೊಳಸಿಲು ಎಂದು ಸಲಹೆ ನಿಡಿದರು. ತದನಂತರ ಕೃಷಿ ಇಲಾಖೆಯ ತಾಂತ್ರಿಕ ಸಿಬ್ಬಂದಿ ಶ್ರೀ ಬಸವರಾಜ ಬಿರಾದರವರು ಇಲಾಖೆ ಯೋಜನೆಗಳ ಮತ್ತು ರಸಗೊಬ್ಬರಗಳ ಕುರಿತು ಮಾತ್ತನಾಡಿದರು ಹಾಗೂ ನೇರದ ರೈತರಿಗೆ ಬೀಜೊಪಚಾರ ಪದ್ಧತಿ ಪ್ರಾತ್ಯಕ್ಷಿಕೆಯ ಮುಖಾಂತರ ಬೀಜೋಪಚಾರದ ಮಹತ್ವ ತಿಳಿಸಿದರು.

ಈ ತರಬೇತಿ ಕಾರ್ಯಕ್ರಮದಲ್ಲಿ ಸುಮರು 50ಕ್ಕೂ ಹೆಚ್ಚು ರೈತರು ಹಾಗೂ ರೈತ ಮಹಿಳೆಯರು ಭಾಗವಹಿಸಿ ಕಾರ್ಯಕ್ರಮದ ಲಾಭ ಪಡೆದರು.

ವಿಷೇಶ ಸೂಚನೆ: ಕೃಷಿ ವಿಜ್ಞಾನ ಕೇಂದ್ರ, ರದ್ದೇವಾಡ್ಗಿಯಲ್ಲಿ ಸುಧಾರಿತ ತೊಗರಿ ತಳಿ: ಜಿ.ಆರ್.ಜಿ–152 ಬೀಜಗಳು ಮಾರಾಟಕ್ಕೆ ಲಭ್ಯವಿದೆ. ಆಸಕ್ತರು ಕೇಂದ್ರಕ್ಕೆ ಭೇಟಿ ಕೊಟ್ಟು ಬೀಜಗಳನ್ನು ಖರೀದಿಸಲು ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಕೃಷಿ ವಿಜ್ಞಾನ ಕೇಂದ್ರ ರದ್ದೇವಾಡ್ಗಿಗೆ ಸಂಪರ್ಕಿಸಿಬೇಕೆಂದು ಕೇಂದ್ರದ ಮುಖ್ಯಸ್ಥರಾದ ಡಾ. ಪಿ. ವಾಸುದೇವ ನಾಯ್ಕ್ ಅವರನ್ನು ತಿಳಿಸಿದರು.

# ನಿಮ್ಮ ದುರಾಡಳಿತ ಮುಚ್ಚಿಕೊಳ್ಳಲು ಆರೆಸ್ಸೆಸ್ ಟೀಕಿಸಬೇಡಿ

■ ಉದಯರಶ್ಮಿ ದಿನಪತ್ರಿಕೆ



**ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಹರಿಹಾಯ್ದ ಬಿಜೆಪಿ ಮುಖಂಡ ಶ್ರೀಶೈಲಗೌಡ ಬಿರಾದಾರ**

ಸಿಂದಗಿ: ದಿನ ಬೆಳಗಾದರೆ ಆರ್‌ಎಸ್‌ಎಸ್ ಜಪ ಮಾಡುವ ಸಚಿವ ಪ್ರಿಯಾಂಕ್ ಖರ್ಗೆ ಅವರೇ, ನಿಮ್ಮ ದುರಾಡಳಿತ ಮುಚ್ಚಿಕೊಳ್ಳಲು ಸಂಘಟನೆಯನ್ನು ಟೀಕಿಸುವುದನ್ನು ನಿಲ್ಲಿಸಿ ಎಂದು ಸಿಂದಗಿ ಮತಕ್ಷೇತ್ರದ ಬಿಜೆಪಿ ಮುಖಂಡ ಶ್ರೀಶೈಲಗೌಡ ಬಿರಾದಾರ ಅವರು ಹರಿಹಾಯ್ದರು.

ಈ ಕುರಿತು ಬುಧವಾರ ಪತ್ರಿಕಾ ಹೇಳಿಕೆ ನೀಡಿದ ಅವರು, ಆರ್‌ಎಸ್‌ಎಸ್ ದೇಶದ ಸಂಸ್ಕೃತಿ ಮತ್ತು ರಾಷ್ಟ್ರೀಯತೆಯನ್ನು ಎತ್ತಿಹಿಡಿಯುವ ಶಿಸ್ತಿನ ದೇಶಭಕ್ತ ಸಂಘಟನೆ. ಇಂತಹ ಸಂಘಟನೆಯ ವಿರುದ್ಧ ಜವಾಬ್ದಾರಿಯುತ ಸ್ಥಾನದಲ್ಲಿರುವ ಸಚಿವರು ಸತತವಾಗಿ ಬೇಜವಾಬ್ದಾರಿ ಹೇಳಿಕೆ ನೀಡುತ್ತಿರುವುದು ಖಂಡನೀಯ. ಸಚಿವ ಪ್ರಿಯಾಂಕ್ ಖರ್ಗೆ ಅವರೇ ಆರ್‌ಎಸ್‌ಎಸ್ ಎಂದು ಹಗಲು ರಾತ್ರಿ ಜಪ ಮಾಡುವುದನ್ನು ಬಿಟ್ಟು, ರಾಜ್ಯದ ಅಭಿವೃದ್ಧಿ ಹಾಗೂ ತಮ್ಮ ಇಲಾಖೆಯ ಕಾರ್ಯಗಳೆಡೆಗೆ ನಿಮ್ಮ ಚಿತ್ತವಿರಲಿ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರದ ವೈಫಲ್ಯಗಳನ್ನು ಮುಚ್ಚಿಹಾಕಲು ಸಚಿವರು ದಿನಬೆಳಗಾದರೆ ಆರ್‌ಎಸ್‌ಎಸ್ ಜಪ ಮಾಡುತ್ತಿದ್ದಾರೆ. ದೇಶಪ್ರೇಮ ಬಿತ್ತುತ್ತಿರುವ ಸಂಘಟನೆಯನ್ನು ಟೀಕಿಸುವ ಮೊದಲು, ಖರ್ಗೆ ಅವರು ತಮ್ಮ ಇಲಾಖೆಯ ಪ್ರಗತಿ ಪರಿಶೀಲನೆ ನಡೆಸಲಿ. ಸಚಿವರ ಇಂತಹ ಸಮಾಜ ಒಡೆಯುವ ಹೇಳಿಕೆಗಳನ್ನು ಸಿಂಧಗಿ ಕ್ಷೇತ್ರದ ಬಿಜೆಪಿ ತೀವ್ರವಾಗಿ ಖಂಡಿಸುತ್ತದೆ.

ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಧೈರ್ಯವಿದ್ದರೆ ತಮ್ಮ ಸರ್ಕಾರದ ಸಾಧನೆಗಳ ಮೇಲೆ ರಾಜಕಾರಣ ಮಾಡಲಿ. ಅದನ್ನು ಬಿಟ್ಟು ಆರ್‌ಎಸ್‌ಎಸ್ ಸಂಘಟನೆಯನ್ನು ಗುರಿಯಾಗಿಸಿಕೊಂಡು ಹೈಕಮಾಂಡ್ ಮನವೊಲಿಸುವ ರಾಜಕಾರಣ ಮಾಡುವುದನ್ನು ಬಿಡಲಿ. ಆರ್‌ಎಸ್‌ಎಸ್ ಯಾವುದೇ ನೋಂದಣಿ ಇಲ್ಲದ ಸಂಸ್ಥೆ ಎಂದು ಸಚಿವರು ಪತ್ರ ಬರೆಯುತ್ತಿರುವುದು ಅವರ ಅಜ್ಞಾನವನ್ನು ತೋರಿಸುತ್ತದೆ. ಸಂಘಟನೆಯು ದೇಶದ ವಿಪತ್ತುಗಳ ಸಮಯದಲ್ಲಿ ಯಾವುದೇ ಪಲಾಪೇಕ್ಷವಿಲ್ಲದೇ ಅಪಾಯದ ಅಂಚಿನಲ್ಲಿರುವ ಜನರಿಗೆ ನೇರವಾಗಿದೆ. ಜವಾಬ್ದಾರಿಯುತ ಸ್ಥಾನದಲ್ಲಿರುವ ಸಚಿವರು ಇಂತಹ ಲಘು ಹೇಳಿಕೆಗಳನ್ನು ನೀಡುವುದನ್ನು ಬಿಟ್ಟು, ಅಭಿವೃದ್ಧಿ ರಾಜಕಾರಣದೆಡೆಗೆ ಗಮನ ಹರಿಸಬೇಕು ಎಂದು ಶ್ರೀಶೈಲಗೌಡ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೂ.23 ರೊಳಗಾಗಿ ಆಕ್ಷೇಪಣೆ ಸಲ್ಲಿಸಲು ಅವಕಾಶ

## ಗ್ರಾಮ ಪಂಚಾಯತಿಗಳಿಗೆ ಚುನಾವಣಾ ಕ್ಷೇತ್ರ ವ್ಯಾಪ್ತಿ, ಸ್ಥಾನ ನಿಗದಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಗ್ರಾಮ ಪಂಚಾಯಿತಿಗಳ ಸಾರ್ವತ್ರಿಕ ಚುನಾವಣೆ–2026 ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 5 ರಂತೆ ಗ್ರಾಮ ಪಂಚಾಯತಿಗೆ ಪ್ರಾದೇಶಿಕ ಚುನಾವಣಾ ಕ್ಷೇತ್ರದ ವ್ಯಾಪ್ತಿ ಮತ್ತು ಸ್ಥಾನಗಳ ನಿಗದಿಪಡಿಸಿ ಸರಕಾರ ಅಧಿಸೂಚನೆ ಹೊರಡಿಸಿದೆ.

ಜಿಲ್ಲೆಯಲ್ಲಿ ಹೊಸದಾಗಿ ರಚನೆ ಮತ್ತು ಪುನರ್‌ರಚನೆಯಾದ ಗ್ರಾಮ ಪಂಚಾಯತಿಗಳಿಗೆ ಪ್ರಾದೇಶಿಕ ಚುನಾವಣಾ ಕ್ಷೇತ್ರದ ವ್ಯಾಪ್ತಿ ಮತ್ತು ಸ್ಥಾನಗಳನ್ನು ನಿಗದಿಪಡಿಸಿ ಸರ್ಕಾರ ಕರಡು ಅಧಿಸೂಚನೆ ಹೊರಡಿಸಿದ್ದು, ಆಕ್ಷೇಪಣೆಗಳಿದ್ದಲ್ಲಿ ಜೂ. 23ರೊಳಗಾಗಿ ಜಿಲ್ಲಾಧಿಕಾರಿ ಕಚೇರಿಗೆ ಸಲ್ಲಿಸಬಹುದಾಗಿದೆ.

ವಿಜಯಪುರ ತಾಲೂಕಿನ ಐನಾಪುರ, ಜುಮನಾಳ ಮತ್ತು ಹೊನಗನಹಳ್ಳಿ, ನಿಡಗುಂದಿ ತಾಲೂಕಿನ ಗಣಿ ಆರ್.ಸಿ, ಬಸವನಬಾಗೇವಾಡಿ ತಾಲೂಕಿನ ವಡವಡಗಿ, ಕೊಲ್ಹಾರ ತಾಲೂಕಿನ ಅರಷಣಗಿ ಮತ್ತು ಸಿದ್ಧನಾಥ ಆರ್.ಸಿ,ತಾಳಿಕೋಟ ತಾಲೂಕಿನ ಸಾಸನೂರ, ಸಿಂದಗಿ ತಾಲೂಕಿನ ಚಾಂದಕವಟೆ, ಯರಗಲ್ ಬಿ.ಕೆ, ಗುತ್ತರಗಿ ಮತ್ತು ಗಬಸಾವಳಗಿ, ಆಲಮೇಲ ತಾಲೂಕಿನ ಗ್ರಾಮ ಪಂಚಾಯತಿಗಳ ಗ್ರಾಮ ಪಂಚಾಯತಿಗಳಿಗೆ ಪ್ರಾದೇಶಿಕ ಚುನಾವಣಾ ಕ್ಷೇತ್ರದ ವ್ಯಾಪ್ತಿ ಮತ್ತು ಸ್ಥಾನಗಳನ್ನು ನಿಗದಿಪಡಿಸಿ ಸರ್ಕಾರ ಕರಡು ಅಧಿಸೂಚನೆ ಹೊರಡಿಸಿದೆ.

ಈ ಗ್ರಾಮ ಪಂಚಾಯಿತಿಗಳಿಗೆ ಸಂಬಂಧಿಸಿದಂತೆ ಆಕ್ಷೇಪಣೆಗಳಿದ್ದಲ್ಲಿ ಜೂ.23 ರ ಸಂಜೆ 5 ಗಂಟೆಯೊಳಗಾಗಿ ವಿಜಯಪುರ ಜಿಲ್ಲಾಧಿಕಾರಿಗಳ ಕಚೇರಿಗೆ ಸಲ್ಲಿಸಬಹುದಾಗಿದೆ. ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಅಪರ ಜಿಲ್ಲಾಧಿಕಾರಿಗಳ ಪ್ರಕಟಣೆ ತಿಳಿಸಿದೆ.

# ವಿಜಯಪುರ: ಪಡಿತರ ಅಕ್ಕಿ ಬಿಡುಗಡೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕೇಂದ್ರ ಸರ್ಕಾರವು ರಾಷ್ಟ್ರೀಯ ಆಹಾರ ಭದ್ರತೆ ಕಾಯ್ದೆಯನ್ವಯ 2026 ನೇ ಮೇ ಹಾಗೂ ಜೂನ್ ತಿಂಗಳಿಗೆ ಸಂಬಂಧಿಸಿದ ಪಡಿತರ ಅಕ್ಕಿಯನ್ನು ಹಿಂದಿನ ತಿಂಗಳು ಮೇ ತಿಂಗಳಲ್ಲಿ ವಿತರಣೆ ಮಾಡಲಾಗಿರುತ್ತದೆ. ರಾಜ್ಯ ಸರ್ಕಾರದ ಅನ್ನಭಾಗ್ಯ ಯೋಜನೆಯ 2026 ನೇ ಮೇ ಹಾಗೂ ಜೂನ್ ಈ ಎರಡೂ ತಿಂಗಳಿಗೆ ಸಂಬಂಧಿಸಿದ ಅಕ್ಕಿ ಪ್ರತಿ ಸದಸ್ಯರಿಗೆ 5 ಕೆಜಿಯಂತೆ ಎರಡೂ ತಿಂಗಳಿಗೆ 10 ಕೆಜಿಯಂತೆ ಇದೇ ತಿಂಗಳು ನ್ಯಾಯ ಬೆಲೆ ಅಂಗಡಿವಾರು ಹಂಚಿಕೆ ಮಾಡಲಾಗಿದೆ.

ಅಂತ್ಯೋದಯ ಅನ್ನ ಯೋಜನೆ ಪಡಿತರ ಚೀಟಿಯಲ್ಲಿನ 4 ಹಾಗೂ ಹೆಚ್ಚಿನ ಸದಸ್ಯರು ಇರುವ ಪಡಿತರ ಚೀಟಿದಾರರು ಎರಡೂ ತಿಂಗಳ ಎನ್‌ಎಫ್‌ಎಸ್‌ಎ ಹೊರತುಪಡಿಸಿ ಇನ್ನುಳಿದಂತೆ ಹಾಗೂ ಆದ್ಯತಾ (ಬಿಪಿಎಲ್) ಪಡಿತರ ಚೀಟಿಗೆ ಪ್ರತಿ ತಿಂಗಳು ಪ್ರತಿ ಸದಸ್ಯರಿಗೆ 5 ಕೆಜಿಯಂತೆ ಒಟ್ಟು 10 ಕೆಜಿ ಅಕ್ಕಿಯನ್ನು ಬಯೋಮೆಟ್ರಿಕ್ ನೀಡುವ ಮೂಲಕ ಪಡಿತರ ಚೀಟಿದಾರರು ಪಡೆಯಬಹುದಾಗಿದೆ ಎಂದು ಜಿಲ್ಲಾಧಿಕಾರಿ ಕಚೇರಿ ಪ್ರಕಟಣೆ ತಿಳಿಸಿದೆ.

# ಜೂ.30 ರೊಳಗೆ ವಾರ್ಷಿಕ ವರದಿ ಸಲ್ಲಿಸದಿದ್ದರೆ ರೂ.10,000/– ದಂಡ

■ ಉದಯರಶ್ಮಿ ದಿನಪತ್ರಿಕೆ

**ಎಲ್ಲಾ ಪ್ರಕಾಶಕರು ದಂಡದಿಂದ ಪಾರಾಗಲು ತಕ್ಷಣವೇ ಪ್ರೆಸ್ ಸೇವಾ ಪೋರ್ಟಲ್ ಮೂಲಕ ವರದಿ ಸಲ್ಲಿಸಲು ಸೂಚನೆ**

ನವದೆಹಲಿ/ಬೆಂಗಳೂರು: ಭಾರತ ಸರ್ಕಾರದ ಪ್ರೆಸ್ ರಿಜಿಸ್ಟ್ರಾರ್ ಜನರಲ್ ಕಚೇರಿಯು (ಮಾಹಿತಿ ಮತ್ತು ಪ್ರಸಾರ ಸಚಿವಾಲಯ) ದೇಶದ ಎಲ್ಲಾ ನೋಂದಾಯಿತ ನಿಯತಕಾಲಿಕೆಗಳ (Periodicals) ಪ್ರಕಾಶಕರು 2024–25ರ ಆರ್ಥಿಕ ವರ್ಷದ ಆಡಿಟ್ ಮಾಡಲಾದ ವಾರ್ಷಿಕ ಹೇಳಿಕೆಯನ್ನು (Annual Statement) 2026ನೇ ಜೂನ್ 30 ರ ಒಳಗಾಗಿ ಸಲ್ಲಿಸುವಂತೆ, ತಪ್ಪಿದಲ್ಲಿ ಭಾರಿ ದಂಡ ವಿಧಿಸಲಾಗುವುದು ಎಂದು ತಿಳಿಸಿದೆ.

ಸರ್ಕಾರ ಹೊರಡಿಸಿರುವ 'ಸಲಹಾ ಸೂಚನೆ ಸಂಖ್ಯೆ 11 (Advisory No. 11 of 2026)' ರ ಪ್ರಕಾರ, 'ಪ್ರೆಸ್ ಮತ್ತು ನಿಯತಕಾಲಿಕೆಗಳ ನೋಂದಣಿ (PRB) ಕಾಯ್ದೆ, 2023' ರ ಸೆಕ್ಷನ್ 7 ರ ಅಡಿಯಲ್ಲಿ ಪ್ರತಿ ನೋಂದಾಯಿತ ನಿಯತಕಾಲಿಕೆಯು ನಿಗದಿತ ಅವಧಿಯೊಳಗೆ ತನ್ನ ವಾರ್ಷಿಕ ಹೇಳಿಕೆಯನ್ನು 'ಪ್ರೆಸ್ ಸೇವಾ ಪೋರ್ಟಲ್ (Press Sewa Portal)' ಮೂಲಕ ಆನ್‌ಲೈನ್‌ನಲ್ಲಿ ಸಲ್ಲಿಸುವುದು ಕಡ್ಡಾಯವಾಗಿದೆ. ಕಾಯ್ದೆಯ ಸೆಕ್ಷನ್ 14 ರ ಪ್ರಕಾರ, ಹಣಕಾಸು ವರ್ಷ ಮುಗಿದ ಒಂದು ವರ್ಷದೊಳಗೆ ವರದಿ ಸಲ್ಲಿಸಲು ವಿಫಲರಾಗುವ ಪ್ರಕಾಶಕರು ದಂಡನೆಗೆ ಗುರಿಯಾಗಲಿದ್ದಾರೆ.

**ದಂಡದ ವಿವರಗಳು:**

ಮೊದಲ ಬಾರಿಯ ಸುಸ್ತಿದಾರರಿಗೆ: ನಿಗದಿತ ದಿನಾಂಕದೊಳಗೆ ವರದಿ ಸಲ್ಲಿಸದಿದ್ದರೆ ಕನಿಷ್ಠ ರೂ. 10,000/– (ಹತ್ತು ಸಾವಿರ ರೂಪಾಯಿ) ದಂಡ ವಿಧಿಸಲಾಗುತ್ತದೆ.

ಮುಂದಿನ ಸರಣಿ ವೈಫಲ್ಯಗಳಿಗೆ: ಪ್ರತಿ ನಂತರದ ವರ್ಷದ ಸುಸ್ತಿಗೆ ದಂಡದ ಮೊತ್ತವು ದುಪ್ಪಟ್ಟಾಗುತ್ತಾ ಹೋಗುತ್ತದೆ (ಉದಾಹರಣೆಗೆ ಎರಡನೇ ಬಾರಿಗೆ ರೂ. 20,000/–).

ಗರಿಷ್ಠ ದಂಡದ ಮಿತಿ: ಈ ದಂಡದ ಮೊತ್ತವು ಗರಿಷ್ಠ ರೂ. 2,00,000/– (ಎರಡು ಲಕ್ಷ ರೂಪಾಯಿ) ವರೆಗೆ ತಲುಪಬಹುದು.

ಕಾಲಾವಕಾಶ ವಿಸ್ತರಣೆ ಇಲ್ಲ: ಸರ್ಕಾರವು ಜೂನ್ 30, 2026 ರ ಗಡುವಿನ ನಂತರ ಯಾವುದೇ ಕಾರಣಕ್ಕೂ ಕಾಲಾವಕಾಶವನ್ನು ವಿಸ್ತರಿಸುವುದಿಲ್ಲ ಎಂದು ತಿಳಿಸುತ್ತಾ, ನಿಯಮ ಉಲ್ಲಂಘಿಸುವ ಪ್ರಕಾಶಕರಿಂದ ಕಡ್ಡಾಯವಾಗಿ ದಂಡ ವಸೂಲಿ ಮಾಡಲಾಗುವುದು ಎಂದು ಪ್ರೆಸ್ ಡೆಪ್ಯುಟಿ ಪ್ರೆಸ್ ರಿಜಿಸ್ಟ್ರಾರ್ ಜನರಲ್ ರತ್ನಾಕರ್ ಪಾಮುಲಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶೇ.50 ದಂಡ ರಿಯಾಯಿತಿ:ಸದುಪಯೋಗಕ್ಕೆ ಪ್ರಾದೇಶಿಕ ಸಾರಿಗೆ ಅಧಿಕಾರಿ ಮನವಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಸಾರಿಗೆ ಇಲಾಖೆಯಲ್ಲಿ 1991–92 ರಿಂದ 2021–22 (31–03–2022)ರವರೆಗೆ ಮೋಟಾರು ವಾಹನ ಕಾಯ್ದೆ ಹಾಗೂ ನಿಯಮಗಳ ಉಲ್ಲಂಘನೆಗೆ ಸಂಬಂಧಿಸಿ ದಾಖಲಾಗಿರುವ ಮತ್ತು ಬಾಕಿ ಉಳಿದಿರುವ ಡಿ.ಎಸ್.ಎ. (ಇಲಾಖಾ ಶಾಸನ) ಪ್ರಕರಣಗಳ ದಂಡದ ಮೊತ್ತದಲ್ಲಿ ಶೇ.50 ರಿಯಾಯಿತಿ ನೀಡಲಾಗಿದೆ. ಬಾಕಿ ಪ್ರಕರಣಗಳ ಇತ್ಯರ್ಥಕ್ಕಾಗಿ ವಿಶೇಷ ಅವಕಾಶ ಕಲ್ಪಿಸಲಾಗಿದ್ದು,ದಿನಾಂಕ:21–06–2026ರಿಂದ 10–07–2026ರವರೆಗೆ ಪ್ರಕರಣಗಳನ್ನು ಇತ್ಯರ್ತಪಡಿಸಿಕೊಳ್ಳಲು ಕಾಲಾವಕಾಶ ಕಲ್ಪಿಸಲಾಗಿದೆ.

ಈ ಅವಧಿಯಲ್ಲಿ ವಾಹನ ಮಾಲೀಕರು ಬಾಕಿ ಇರುವ ಪ್ರಕರಣಗಳ ದಂಡದ ಮೊತ್ತದ ಶೇ.50ರಷ್ಟು ಹಣವನ್ನು ಪಾವತಿಸಿ ತಮ್ಮ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಬಹುದಾಗಿದ್ದು, ದಂಡದ ಮೊತ್ತ ಪಾವತಿಸಲು ಯಾವುದೇ ಆನ್‌ಲೈನ್ ವ್ಯವಸ್ಥೆ ಅಥವಾ ಲಿಂಕ್ ಇರುವುದಿಲ್ಲ. ವಾಹನ ಮಾಲೀಕರು ಕಚೇರಿ ಅವಧಿಯಲ್ಲಿ ಸಂಬಂಧಿಸಿದ ಸಾರಿಗೆ ಕಚೇರಿಗೆ ಭೇಟಿ ನೀಡಿ, ನಗದು ಕೌಂಟರ್‌ನಲ್ಲಿ ದಂಡದ ಮೊತ್ತವನ್ನು ಪಾವತಿಸಿ ಅಧಿಕೃತ ರಸೀದಿ ಪಡೆದು ತಮ್ಮ ಪ್ರಕರಣಗಳನ್ನು ಮುಕ್ತಾಯಗೊಳಿಸಬಹುದು. ವಾಹನ ಮಾಲೀಕರು ಈ ಸುವರ್ಣಾವಕಾಶವನ್ನು ಸದುಪಯೋಗಪಡಿಸಿಕೊಳ್ಳಬಹುದಾಗಿದೆ ಎಂದು ಪ್ರಾದೇಶಿಕ ಸಾರಿಗೆ ಇಲಾಖೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎನ್‌ಎಚ್‌ಎಂ ಒಳಗುತ್ತಿಗೆ ನೌಕರರ ಸೇವೆ ಖಾಯಂಗೊಳಿಸಿ :ಬಗಲಿ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: ರಾಜ್ಯ ಕಾಂಗ್ರೆಸ್ ಪಕ್ಷವು ತನ್ನ ಚುನಾವಣಾ ಪ್ರಣಾಳಿಕೆಯಲ್ಲಿ ನೀಡಿದ ಭರವಸೆಗಳ ಪೈಕಿ, ರಾಷ್ಟ್ರೀಯ ಆರೋಗ್ಯ ಅಭಿಯಾನದ ಅಡಿಯಲ್ಲಿ (ಓಊಂ) ಕಾರ್ಯನಿರ್ವಹಿಸುತ್ತಿರುವ ಒಳಗುತ್ತಿಗೆ ನೌಕರರ ಸೇವೆಯನ್ನು ಕಾಯಂಗೊಳಿಸುವ ಭರವಸೆಯು ಒಂದಾಗಿತ್ತು. ಇದೀಗ ಸರ್ಕಾರ ಅಧಿಕಾರಕ್ಕೆ ಬಂದು ಮೂರು ವರ್ಷಗಳು ಕಳೆದರೂ ಈ ಭರವಸೆ ಇನ್ನೂ ಈಡೇರಿಲ್ಲ ಎಂದು ಸಂತೋಷ್ ಬಗಲಿ ಆಕ್ರೋಶ ವ್ಯಕ್ತಪಡಿಸಿದರು.

ಈ ಕುರಿತು ಅಪರ ಜಿಲ್ಲಾಧಿಕಾರಿ ಡಾ.ಔದ್ರಾಮ ಅವರ ಮೂಲಕ ಸರಕಾರಕ್ಕೆ ಮನವಿ ಸಲ್ಲಿಸಿ ಮಾತನಾಡಿದ ಅವರು, ರಾಜ್ಯಾದ್ಯಂತ 25 ಸಾವಿರಕ್ಕೂ ಅಧಿಕ ಒಳಗುತ್ತಿಗೆ ನೌಕರರು ಓಊಂ ಅಡಿಯಲ್ಲಿ 10, 20 ವರ್ಷಗಳಿಂದ ಅತ್ಯಂತ ನಿಷ್ಠೆಯಿಂದ ಸೇವೆ ಸಲ್ಲಿಸುತ್ತಿದ್ದು. ಗ್ರಾಮೀಣ ಮತ್ತು ನಗರ ಪ್ರದೇಶಗಳ ಆರೋಗ್ಯ ಸೇವೆಯನ್ನು ಜನರಿಗೆ ತಲುಪಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿದ್ದಾರೆ. ಕೋವಿಡ್ ಅನ್ನು ಮಹಾಮಾರಿ ದೇಶವನ್ನು ವಕರಿಸಿಕೊಂಡ ಸಂಕಷ್ಟದ ಸಂದರ್ಭದಲ್ಲಿ ಜನರ ಆರೋಗ್ಯ ರಕ್ಷಣೆಗಾಗಿ ತಮ್ಮ ಕುಟುಂಬದ ಹಂಗು ತೊರೆದು, ಸೋಂಕಿನ ಭಯದ ನಡುವೆಯೂ ಜನರ ಸೇವೆಯಲ್ಲಿ ನಿರಂತರವಾಗಿತೊಡಗಿಕೊಂಡಿದ್ದವರು ಇದೆ ಓಊಂ ನೌಕರರು. ಅವರ ಸೇವೆಯನ್ನು ಆ ಸಂದರ್ಭದಲ್ಲಿ ಎಲ್ಲರೂ ಶ್ಲಾಘಿಸಿದರು. ಆದರೆ ಇಂದು ಅದೇ ನೌಕರರು ಉದ್ಯೋಗ ಭದ್ರತೆಗಾಗಿ ಸರಕಾರದ ಮುಂದೆ ಮನವಿ ಮಾಡಿಕೊಳ್ಳಬೇಕಾದ ಪರಿಸ್ಥಿತಿ ನಿರ್ಮಾಣವಾಗಿರುವುದು ಬೇಸರದ ಸಂಗತಿಯಾಗಿದೆ. ಸರ್ಕಾರ ಈ ವಿಚಾರದಲ್ಲಿ ವಿಳಂಬ ಮಾಡದೆ ತ್ವರಿತ ಕ್ರಮ ಕೈಗೊಂಡು ಚುನಾವಣಾ ಪ್ರಣಾಳಿಕೆಯಲ್ಲಿ ನೀಡಿದ ಭರವಸೆಯನ್ನು ಗೌರವಿಸಬೇಕು. ಓಊಂ ಒಳಗುತ್ತಿಗೆ ನೌಕರರ ಸೇವೆಯನ್ನು ಕಾಯಂಗೊಳಿಸಿ , ಅವರಿಗೆ ಉದ್ಯೋಗ ಭದ್ರತೆ, ವೇತನ ಸೌಲಭ್ಯಗಳು, ಇತರೆ ಸೇವಾ ಸೌಲಭ್ಯಗಳನ್ನು ಒದಗಿಸಬೇಕು. ಚುನಾವಣಾ ಪ್ರಣಾಳಿಕೆಯಲ್ಲಿ ನೀಡಿದ ಭರವಸೆಯಲ್ಲಿ ಈಡೇರಿಸಿ ತನ್ನ ಬದ್ಧತೆಯನ್ನು ಉಳಿಸಿಕೊಳ್ಳಬೇಕು ಎಂದು ಸಂತೋಷ್ ಬಗಲಿ ಆಗ್ರಹಿಸಿದರು.

# ಆಲಮೇಲ: ಮೊಹರಂ ಪೂರ್ವಬಾವಿ ಸಭೆ

■ ಉದಯರಶ್ಮಿ ದಿನಪತ್ರಿಕೆ



ಆಲಮೇಲ: ಪಟ್ಟಣದ ಪೋಲಿಸ ಠಾಣೆ ಆವರಣದಲ್ಲಿ ಮೊಹರಂ ಹಬ್ಬದ ಪ್ರಯುಕ್ತ ಪೂರ್ವಭಾವಿ ಸಭೆ ನಡೆಯಿತು.

ಪಿ ಎಸ್ ಐ ಅರವಿಂದ ಅಂಗಡಿ ಅವರು ಅದ್ಯಕ್ಷತೆ ವಹಿಸಿ ಮಾತನಾಡಿ, ಮೊಹರಂ ಹಬ್ಬವನ್ನು ಹಿಂದು ಮುಸ್ಲಿಂ ಸಹೋದರರು ಶಾಂತಿಯುತವಾಗಿ ಕಾನೂನು ಸುವ್ಯವಸ್ಥೆ ಪರಿಪಾಲನೆ ಮಾಡಿ, ಸಹೋದರತ್ವ, ಸಹಬಾಳ್ವೆಯಿಂದ ಆಚರಿಸಿ ಎಂದು ಹೇಳಿದರು.

ಗ್ರಾಮದ ಗಣ್ಯರಾದ ರಮೇಶ ಬಂಟನೂರ, ಹರೀಶ ಎಂಟಮನ, ಮೂಹರಂ ಆಚರಣೆ ಮಾಡುವ ಮಾಹಿತಿಯನ್ನು ಸಭೆಗೆ ತಿಳಿಸಿದರು.

ಪಟ್ಟಣದಲ್ಲಿ ವಿವಿದ ಸ್ಥಳದಲ್ಲಿ ದೇವರ ಸ್ಥಾಪನೆ ನಡೆಯುವ ಕಾರ್ಯಕ್ರಮಗಳ ಕುರಿತು ಚರ್ಚಿಸಲಾಯಿತು.

ತಾಲೂಕಿನ ವಿವಿಧ ಗ್ರಾಮಗಳಲ್ಲಿ ಒಟ್ಟು 36 ಸ್ಥಳಗಳಲ್ಲಿ ದೇವರ ಪ್ರತಿಷ್ಠಾಪನೆ ಮಾಡಲಾಗುತ್ತದೆ ಎಂದು ಸಭೆಯಲ್ಲಿ ತಿಳಿಸಿದರು.

ವಿವಿದ ಗ್ರಾಮದ ಗಣ್ಯರು, ಗ್ರಾಮಸ್ಥರು, ಪೋಲಿಸ್ ಸಿಬ್ಬಂದಿ ಇದ್ದರು

# ಮೊಹರಂ ಹಬ್ಬವನ್ನು ಶಾಂತಿ–ಸಹಕಾರದಿಂದ ಆಚರಿಸಿ :ಚೌರ

■ ಉದಯರಶ್ಮಿ ದಿನಪತ್ರಿಕೆ




ದೇವರಹಿಪ್ಪರಗಿ: ತ್ಯಾಗ, ಹುತಾತ್ಮರ ಸಂಕೇತವಾಗಿರುವ ಮೊಹರಂ ಹಬ್ಬವನ್ನು ಶಾಂತಿ, ಸಹನೆ, ಸಹಕಾರದಿಂದ ಆಚರಿಸಬೇಕು ಎಂದು ಪಿಎಸ್ಐ ಪ್ರೇಮಾ ಚೌರ ಹೇಳಿದರು.

ಪಟ್ಟಣದ ಪೊಲೀಸ್ ಠಾಣೆಯ ಆವರಣದಲ್ಲಿ ಮಂಗಳವಾರ ಮೊಹರಂ ಹಬ್ಬದ ನಿಮಿತ್ಯ ಜರುಗಿದ ಶಾಂತಿಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪಟ್ಟಣದ 4 ಮಸೀದೆಗಳಿಗೆ ಸಿಸಿ ಕ್ಯಾಮೆರಾ ಅಳವಡಿಕೆ ಅಗತ್ಯವಾಗಿದೆ. ಅದಕ್ಕಾಗಿ ಸಹಕಾರ ನೀಡಲು ವಿನಂತಿಸಿ, ಇಲ್ಲಿ ಯಾವುದೇ ರೀತಿಯ ಭಿನ್ನಾಭಿಪ್ರಾಯಕ್ಕೆ ಅವಕಾಶವಿಲ್ಲ. ಎಲ್ಲರೂ ಶಾಂತಿ, ಸಹನೆ ಯಿಂದ ಪರಸ್ಪರ ಹಬ್ಬಗಳ ಆಚರಣೆಗೆ ಸಹಕಾರ ನೀಡಬೇಕು ಅಹಿತಕರ ಘಟನೆಗಳು ಜರುಗದಂತೆ ಪ್ರತಿಯೊಬ್ಬರು ನಡೆದುಕೊಳ್ಳಬೇಕು ಎಂದರು.

ಪಟ್ಟಣ ಪಂಚಾಯಿತಿ ಉಪಾಧ್ಯಕ್ಷ ರಮೇಶ ಮಸಬಿನಾಳ, ಅಂಜುಮನ್ ಇಸ್ಲಾಂ ಕಮೀಟಿ ಅಧ್ಯಕ್ಷ ಮಹಿಬೂಬ್ ಹುಂಡೇಕಾರ ಹಾಗೂ ಶಂಕರಗೌಡ ಪಾಟೀಲ ಮಾತನಾಡಿದರು.

ಪಟ್ಟಣ ಪಂಚಾಯಿತಿ ಸದಸ್ಯರಾದ ಕಾಸುಗೌಡ ಬಿರಾದಾರ(ಜಲಕತ್ತಿ), ಕಾಸಪ್ಪ ಜಮಾದಾರ, ಎಂ.ಎಚ್.ಪಾನಪರೋಷ್, ಮಹ್ಮದ್‌ರಫೀಕ್ ಮೋಮಿನ್, ನಿಂಗು ಯಂಭತ್ನಾಳ, ಬಲವಂತ ಹೊನ್ನಮೀಸಿ, ಮಲ್ಲು ಜಮಾದಾರ, ಶಂಕರ ಜಮಾದಾರ, ಜಾನು ಗುಡಿಮನಿ, ಭೀಮಾಶಂಕರ ಮಿಂಚನಾಳ, ರಾವುತ್ ಎಸ್.ಟಿ, ಜಿ.ಎಮ್.ಹಿರೇಮಠ, ಹನುಮಂತ ಸಣ್ಣಕ್ಕಿ, ಯಾಕೂಬ್ ಶಹಾಪೂರ, ಜೆ.ಎನ್.ವಡ್ಡೋಡಗಿ, ಪಿ.ಡಿ.ಹಂಗರಗಿ ಸಿಬ್ಬಂದಿ ಸಿದ್ದು ಗಂಗನಳ್ಳಿ, ಶ್ರೀಕಾಂತ ಶಿನ್ನೂರ ಇದ್ದರು.

## ಹೊನವಾಡ: ಮೊಹರಂ ಆಚರಣೆ ನಿಷೇಧ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಯ ತಿಕೋಟ ತಾಲೂಕಿನ ಹೊನವಾಡ ಗ್ರಾಮದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಜೂನ್ 17 ರಿಂದ 26 ರವರೆಗೆ ಮೊಹರಂ ಹಬ್ಬ ಆಚರಣೆ ನಿಷೇಧಿಸಿ, ಜಿಲ್ಲಾ ದಂಡಾಧಿಕಾರಿಗಳಾದ ಜಿಲ್ಲಾಧಿಕಾರಿ ಡಾ.ಆನಂದ.ಕೆ ಅವರು ಆದೇಶ ಹೊರಡಿಸಿದ್ದಾರೆ.

## ಕಲಕೇರಿ: ಮೊಹರಂ ಆಚರಣೆ ನಿರ್ಬಂಧಿಸಿ ಆದೇಶ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಯ ತಾಳಿಕೋಟೆ ತಾಲೂಕಿನ ಕಲಕೇರಿ ಗ್ರಾಮದಲ್ಲಿ ಜೂ.17 ರಿಂದ 26 ರವರೆಗೆ ಕಾನೂನು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಮೊಹರಂ ಹಬ್ಬ ಆಚರಣೆಯನ್ನು ನಿರ್ಬಂಧಿಸಿ ಜಿಲ್ಲಾ ದಂಡಾಧಿಕಾರಿಗಳಾದ ಜಿಲ್ಲಾಧಿಕಾರಿ ಡಾ.ಆನಂದ.ಕೆ ಅವರು ಆದೇಶ ಹೊರಡಿಸಿದ್ದಾರೆ.

## ನಿಷ್ಕ್ರಿಯ ಸಹಕಾರ ಸಂಘಗಳು: ಆಕ್ಷೇಪಣೆ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಸಹಕಾರ ಸಂಘಗಳು ನಿಯಮಾನುಸಾರ ಕಾರ್ಯ ನಿರ್ವಹಿಸದೇ ಸ್ಥಗಿತಗೊಂಡಿರುವ ಸಹಕಾರ ಸಂಘಗಳನ್ನು ಪುನಶ್ಚೇತನ–ರದ್ಧತಿ ಮಾಡಲು ಕ್ರಮವಹಿಸಲಾಗುತ್ತಿದ್ದು, ಈ ಕುರಿತು ಸಹಕಾರ ಸಂಘಗಳ ಉಪ ನಿಬಂಧಕರು ಆಕ್ಷೇಪಣೆಗಳನ್ನು ಆಹ್ವಾನಿಸದ್ದಾರೆ.

ಜಿಲ್ಲೆಯ ಭಾರತ ಮುದ್ರಣಾಲಯ ಸಹಕಾರ ಸಂಘ ನಿ., ವಿಜಯಪುರ, ಜಾಪೂರ ಬ್ರಿಕ್ಸ್ ಮತ್ತು ಟಾಯಿಲ್ಸ್ ಕೂಲಿಕಾರರ ಸಹಕಾರ ಸಂಘ ನಿ., ವಿಜಯಪುರ, ಶ್ರೀ ಸಿದ್ದೇಶ್ವರ ಮಹಿಳಾ ವಿವಿಧೋದ್ದೇಶಗಳ ಸಹಕಾರ ಸಂಘ ನಿ.,ವಿಜಯಪುರ ಹಾಗೂ ಮಹಿಳಾ ವಿವಿಧೋದ್ದೇಶಗಳ ಸಹಕಾರ ಸಂಘ ನಿ., ಗ್ಯಾಂಗಬಾವಡಿ, ವಿಜಯಪುರ ಸಂಘಗಳು ದೀರ್ಘಕಾಲದಿಂದ ಸ್ಥಗಿತ ಅಥವಾ ಸಮಾಪನೆಗೊಂಡಿದ್ದು, ಕಾರ್ಯ ನಿರ್ವಹಿಸದೇ ಇರುವುದಾಗಿ ತಿಳಿದು ಬಂದಿದೆ.

ಅಂತಿಮವಾಗಿ ಈ ಪ್ರಕಟಣೆಗಳ ಮೂಲಕ ಆಕ್ಷೇಪಣೆ,ಹೇಳಿಕೆಗಳನ್ನು ಆಹ್ವಾನಿಸಲಾಗಿದ್ದು, ಏಳು ದಿನಗಳೊಳಗಾಗಿ ಖುದ್ದಾಗಿ ಸಹಕಾರ ಸಂಘಗಳ ಉಪ ನಿಬಂಧಕರ ಕಚೇರಿಗೆ ಹಾಜರಾಗಿ,ತಮ್ಮ ಹೇಳಿಕೆ ದಾಖಲೆ ಸಲ್ಲಿಸುವಂತೆ ವಿಜಯಪುರದ ಸಹಕಾರ ಸಂಘಗಳ ಉಪ ನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭಾರತೀಯ ಪತ್ರಿಕೆಗಳ ಪ್ರೆಸ್ ರಿಜಿಸ್ಟ್ರಾರ್ ಜನರಲ್ ಕಚೇರಿ ಪ್ರಕಟಣೆ

■ ಉದಯರಶ್ಮಿ ದಿನಪತ್ರಿಕೆ

**ರದ್ದಾದ ಪತ್ರಿಕೆಗಳ ಶೀರ್ಷಿಕೆಗಳ ಮರುಸ್ಥಾಪನೆಗೆ ದಂಡ ಪಾವತಿಸಲು ಜೂ.30 ಕೊನೆಯ ದಿನ**

ನವದೆಹಲಿ/ಬೆಂಗಳೂರು: ವಾರ್ಷಿಕ ವರದಿಗಳನ್ನು (Annual Statements) ಸಲ್ಲಿಸದ ಕಾರಣಕ್ಕಾಗಿ ರದ್ದಾಗಿರುವ ಪತ್ರಿಕೆಗಳ ಶೀರ್ಷಿಕೆಗಳನ್ನು (Titles) ಮರುಸ್ಥಾಪಿಸಲು ಭಾರತ ಸರ್ಕಾರದ ಪತ್ರಿಕೆಗಳ ಪ್ರೆಸ್ ರಿಜಿಸ್ಟ್ರಾರ್ ಜನರಲ್ ಕಚೇರಿಯು (PRGI) ಪ್ರಕಾಶಕರಿಗೆ ಕೊನೆಯ ಅವಕಾಶವನ್ನು ನೀಡಿದೆ.

ಪ್ರೆಸ್ ಮತ್ತು ರಿಜಿಸ್ಟ್ರೇಷನ್ ಆಫ್ ಪಿರಿಯಾಡಿಕಲ್ಸ್ (PRP) ಕಾಯ್ದೆ, 2023 ರ ನಿಯಮಗಳನ್ನು ಪಾಲಿಸದ ಕಾರಣಕ್ಕಾಗಿ ಹಲವು ಪತ್ರಿಕೆಗಳ ಶೀರ್ಷಿಕೆಗಳನ್ನು ರದ್ದುಗೊಳಿಸಲಾಗಿತ್ತು. ಈ ಕುರಿತು ಪ್ರಕಾಶಕರು ಮತ್ತು ಪಾಲುದಾರರಿಂದ ಬಂದ ಮನವಿಗಳನ್ನು ಪುರಸ್ಕರಿಸಿ, ಇಲಾಖೆಯು ಈ ಅಂತಿಮ ಅವಕಾಶವನ್ನು ಕಲ್ಪಿಸಿದೆ.

ಬಾಕಿ ಇರುವ ದಂಡವನ್ನು ಪಾವತಿಸಲು ಮತ್ತು ವಾರ್ಷಿಕ ವರದಿಯನ್ನು ಸಲ್ಲಿಸಲು 30 ಜೂನ್ 2026 ಕೊನೆಯ ದಿನವಾಗಿದೆ.

ರದ್ದಾದ ಪಟ್ಟಿಯಿಂದ ಶೀರ್ಷಿಕೆಯನ್ನು ತೆಗೆದುಹಾಕಲು, ಪ್ರಕಾಶಕರು ಬಾಕಿ ಇರುವ ದಂಡವನ್ನು ಪಾವತಿಸಬೇಕು ಮತ್ತು 2024–25ರ ಆರ್ಥಿಕ ವರ್ಷದ ವಾರ್ಷಿಕ ವರದಿಯನ್ನು ಪ್ರೆಸ್ ಸೇವಾ ಪೋರ್ಟಲ್ (ಕಡಿಞ ಖಜತಿಚ ಕಂಡಿಣಚಟ) ಮೂಲಕ ಕಡ್ಡಾಯವಾಗಿ ಸಲ್ಲಿಸಬೇಕು.

ಜೂನ್.30ರ ನಂತರ ಯಾವುದೇ ಕಾರಣಕ್ಕೂ ಕಾಲಾವಕಾಶವನ್ನು ವಿಸ್ತರಿಸಲಾಗುವುದಿಲ್ಲ. ಈ ಗಡುವಿನೊಳಗೆ ದಂಡ ಪಾವತಿಸದಿದ್ದರೆ ಶೀರ್ಷಿಕೆಗಳನ್ನು ಶಾಶ್ವತವಾಗಿ ರದ್ದುಗೊಳಿಸಲಾಗುವುದು ಮತ್ತು ಈ ಬಗ್ಗೆ ಯಾವುದೇ ಮೇಲ್ಮನವಿಗಳನ್ನು ಸ್ವೀಕರಿಸಲಾಗುವುದಿಲ್ಲ ಎಂದು ಉಪ ಪ್ರೆಸ್ ರಿಜಿಸ್ಟ್ರಾರ್ ಜನರಲ್ ರತ್ನಾಕರ್ ಪಾಮುಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವೃದ್ಧಾಶ್ರಮಗಳನ್ನು ನಡೆಸಲು ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ 2025–26ನೇ ಸಾಲಿನಿಂದ ಜಿಲ್ಲಾ ಮಟ್ಟದಲ್ಲಿ ಹಿರಿಯ ನಾಗರಿಕರ ರಕ್ಷಣೆ ಹಾಗೂ ನೆರವಿಗಾಗಿ ವೃದ್ಧಾಶ್ರಮಗಳನ್ನು ನಡೆಸಲು ಜಿಲ್ಲೆಯ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಸ್ವಯಂ ಸೇವಾ ಸಂಸ್ಥೆಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಹ ಸ್ವಯಂ ಸೇವಾ ಸಂಸ್ಥೆಗಳು ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಜಿಲ್ಲಾ ಪಂಚಾಯತ್ ರಸ್ತೆ, ವಿಜಯಪುರ ಕಚೇರಿಯಿಂದ ಜೂನ್ 25ರವರೆಗೆ ಅರ್ಜಿ ಸಮಾಜ ಕಲ್ಯಾಣ ಇಲಖೆಯ ಕಚೇರಿಯಿಂದ ಪಡೆದುಕೊಂಡು, ಭರ್ತಿ ಮಾಡಿದ ಅರ್ಜಿಯೊಂದಿಗೆ ಅಗತ್ಯ ದಾಖಲೆಗಳ ಸಹಿತ ಜೂನ್ 30ರೊಳಗೆ ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ,ವಿಜಯಪುರ ಇವರ ಕಚೆರಿಗೆ ಸಲ್ಲಿಸಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಪ್ರಕಟಣೆ ತಿಳಿಸಿದೆ.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR